MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್ Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ Cell : 9743496111

ಸಂಪುಟ: 04 | ಸಂಚಿಕೆ: 223 | ಗುರುವಾರ : 19-06-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 223 | THURSDAY : 19-06-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

# ಮನೆ ಮನೆಗೆ ಇ-ಖಾತಾ




**ಬೆಂಗಳೂರು ಅಭಿವೃದ್ಧಿ, ಖಾತಾ ವಿತರಣೆ ಸೇರಿದಂತೆ ಬೆಂಗಳೂರು ನಗರಾಭಿವೃದ್ಧಿ ಸಚಿವರು, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್‌ರವರು ಕುಮಾರ ಕೃಪಾ ಅತಿಥಿ ಗೃಹದಲ್ಲಿ ಬೆಂಗಳೂರು ವ್ಯಾಪ್ತಿಯ ಸಚಿವರು, ಶಾಸಕರ ಸಭೆ ನಡೆಸಿ ಚರ್ಚಿಸಿದರು. ಸಚಿವರಾದ ಕೆ.ಜೆ. ಜಾರ್ಜ್, ಜಮೀರ್ ಅಹ್ಮದ್ ಖಾನ್, ಕೃಷ್ಣಬೈರೇಗೌಡ, ಭೈರತಿ ಸುರೇಶ್, ಶಾಸಕರುಗಳಾದ ಎಂ. ಕೃಷ್ಣಪ್ಪ, ರಿಜ್ವಾನ್ ಅರ್ಷದ್, ಎಸ್.ಟಿ. ಸೋಮಶೇಖರ್, ಪ್ರಿಯಾಕೃಷ್ಣ, ಆನೇಕಲ್ ಬಿ. ಶಿವಣ್ಣ, ಎಂ.ಸಿ. ಶ್ರೀನಿವಾಸ್, ಮತ್ತಿತರರು ಉಪಸ್ಥಿತರಿದ್ದರು.**

**ಬೆಂಗಳೂರು,ಜೂ.18–** ಬೆಂಗಳೂರಿನಲ್ಲಿ ದೊಡ್ಡ ಮಟ್ಟದಲ್ಲಿ ಆಸ್ತಿ ಖಾತಾ ಆಂದೋಲನವನ್ನು ಹಮ್ಮಿಕೊಳ್ಳಲಾಗುತ್ತಿದ್ದು, ಜು. 1 ರಿಂದ ಇ-ಖಾತಾ ಆಂದೋಲನವನ್ನು ಆರಂಭಿಸಲಾಗುವುದು ಎಂದು ಉಪಮುಖ್ಯಮಂತ್ರಿ ಹಾಗೂ ಬೆಂಗಳೂರು ನಗರಾಭಿವೃದ್ಧಿ ಸಚಿವ ಡಿ.ಕೆ ಶಿವಕುಮಾರ್ ಹೇಳಿದರು.

ಬೆಂಗಳೂರಿನ ಅಭಿವೃದ್ಧಿಗೆ ಸಂಬಂಧಿಸಿದಂತೆ ವಿವಿಧ ವಿಚಾರಗಳ ಬಗ್ಗೆ ಬೆಂಗಳೂರು ವ್ಯಾಪ್ತಿಯ ಸಚಿವರು ಹಾಗೂ ಕಾಂಗ್ರೆಸ್ ಶಾಸಕರ ಜತೆ ಕುಮಾರ ಪಾರ್ಕ್‌ನ ತಮ್ಮ ಸರ್ಕಾರಿ ನಿವಾಸದಲ್ಲಿ ಸಭೆ ನಡೆಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಬೆಂಗಳೂರಿನಲ್ಲಿ ಇ-ಖಾತಾ ಆಂದೋಲನ ರೂಪಿಸಲಾಗುತ್ತಿದ್ದು, ಜು. 1 ರಿಂದ ಮನೆ ಮನೆಗೆ ಇ-ಖಾತಾ ದಾಖಲೆಗಳನ್ನು ತಲುಪಿಸುವ ಕೆಲಸವನ್ನು ಮಾಡಲಾಗುವುದು ಎಂದು ಹೇಳಿದರು. ಬೆಂಗಳೂರಿನಲ್ಲಿ 25 ಲಕ್ಷ ಮನೆಗಳ ಆಸ್ತಿಗಳಿದ್ದು, ಈ ಪೈಕಿ 5 ಲಕ್ಷ ಮಂದಿ ದಾಖಲೆ ಅಪ್‌ಲೋಡ್ ಮಾಡಿದ್ದಾರೆ. ಇನ್ನೂ 20 ಲಕ್ಷ ಆಸ್ತಿಗಳ ದಾಖಲೆ ಬಾಕಿ ಇದೆ. ಹಾಗಾಗಿ, ಜು. 1 ರಿಂದ ಇ-ಖಾತಾ ಆಂದೋಲನವನ್ನು ಇಡೀ ತಿಂಗಳು ನಡೆಸಿ ಆ ಮೂಲಕ ಇ-ಖಾತಾ ದಾಖಲೆಗಳನ್ನು ಮನೆ ಮಾಲೀಕರಿಗೆ ತಲುಪಿಸಲಾಗುವುದು ಎಂದು ಹೇಳಿದರು.

ಈ-ಖಾತಾ ಆಂದೋಲನದ ಭಾಗವಾಗಿ ಮನೆ ಮನೆಗೆ ತೆರಳಿ ಜಾಗೃತಿ ಮೂಡಿಸುವ ಜತೆಗೆ ಜಾಹೀರಾತು ಸೇರಿದಂತೆ ಎಲ್ಲ ರೀತಿಯ ಪ್ರಚಾರವನ್ನು ಮಾಡುತ್ತೇವೆ. ಆ ಮೂಲಕ ಖಾಸಗಿ ಆಸ್ತಿ ಮಾಲೀಕರು ಜಾಗೃತಿ ವಹಿಸಿ ತಮ್ಮ ದಾಖಲೆಗಳನ್ನು ನೀಡಿ ಇ-ಖಾತಾ ಮಾಡಿಸಿಕೊಳ್ಳಬಹುದು ಎಂದು ಹೇಳಿದರು.

ಕಂದಾಯ ಸಚಿವ ಕೃಷ್ಣಬೈರೇಗೌಡ ಅವರ ಕ್ಷೇತ್ರದಲ್ಲಿ ಪ್ರಾಯೋಗಿಕ ಯೋಜನೆ ಮಾಡಲಾಗಿದ್ದು, 25 ಸಾವಿರ ಆಸ್ತಿಗಳ ಖಾತಾ ದಾಖಲೆಗಳು ಸಿದ್ಧಗೊಂಡಿವೆ. ಜು. 1 ರಿಂದ ಇ-ಖಾತಾ ಆಂದೋಲನವನ್ನು ನಡೆಸಲಾಗುವುದು ಎಂದು ಹೇಳಿದರು. ಕಂದಾಯ ಆಸಿಗಳಿಗೆ ಬಿ-ಖಾತಾ 2ನೇ ಪುಟಕ್ಕೆ

# ಶಾಲಾ ವಿದ್ಯಾರ್ಥಿಗಳೊಂದಿಗೆ ಬಿಸಿಯೂಟ ಸವಿದ ತಹಶೀಲ್ದಾರ್



**ಯುವ ಮಾರ್ಗ ಸುದ್ದಿ**

**ಮಾನ್ವಿ,ಜೂ.18–** ಶಾಲಾ ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಬಿಸಿಯೂಟ ಸಿಗುವುದನ್ನು ಖಚಿತಪಡಿಸಿಕೊಳ್ಳಲು ಮಾನ್ವಿ ತಹಶೀಲ್ದಾರ್ ಭೀಮರಾಯ ಅವರು ಬುಧವಾರ ಪಟ್ಟಣದ ಬಾಲಕಿಯರ ಸರ್ಕಾರಿ ಪ್ರೌಢ ಶಾಲೆಗೆ ಭೇಟಿ ನೀಡಿ, ಬಿಸಿಯೂಟ ಯೋಜ ನೆಯನ್ನು ಪರಿಶೀಲಿಸಿದರು. ಈ ಸಂದರ್ಭದಲ್ಲಿ ಅವರು ವಿದ್ಯಾರ್ಥಿಗಳೊಂದಿಗೆ ಕುಳಿತು ಬಿಸಿಯೂಟವನ್ನು ಸವಿದರು.



ತಹಶೀಲ್ದಾರ್ ಅವರು ಶಾಲೆಯ ಅಡುಗೆ ಕೋಣೆ ಗೆ ಭೇಟಿ ನೀಡಿ, ಆಹಾರ ತಯಾರಿಕೆಯ ವಿಧಾನ, ಬಳಸಿದ ಪದಾರ್ಥಗಳ ಗುಣಮಟ್ಟ, ಅಡುಗೆಯವರ ಸ್ವಚ್ಛತೆ ಮತ್ತು ಒಟ್ಟಾರೆ ನೈರ್ಮಲ್ಯದ ಬಗ್ಗೆ ಪರಿಶೀಲನೆ ನಡೆಸಿದರು. ನಂತರ, ಮಕ್ಕಳಿಗೆ ಬಡಿಸಲಾಗಿದ್ದ ಬಿಸಿಯೂಟವನ್ನು ತಾವೇ ಸ್ವತಃ ಸವಿಯುವ ಮೂಲಕ, ಅದರ ರುಚಿ ಮತ್ತು ಗುಣಮಟ್ಟವನ್ನು ಖಚಿತಪಡಿಸಿಕೊಂಡರು.

ಈ ಕುರಿತು ಮಾತನಾಡಿದ ತಹಶೀಲ್ದಾರ್, "ಸರ್ಕಾರದ ಮಹತ್ವಾಕಾಂಕ್ಷಿ ಬಿಸಿಯೂಟ ಯೋಜನೆಯು ಮಕ್ಕಳಿಗೆ ಪೌಷ್ಟಿಕ ಆಹಾರ ಒದಗಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಇದರ ಅನುಷ್ಠಾನದಲ್ಲಿ ಯಾವುದೇ ಲೋಪವಾಗದಂತೆ ನೋಡಿಕೊಳ್ಳುವುದು ನಮ್ಮ ಆದ್ಯ ಕರ್ತವ್ಯ. ಇಂದಿನ ಭೇಟಿಯಿಂದ ಅಡುಗೆ ಮನೆಯಲ್ಲಿ ಉತ್ತಮ ನೈರ್ಮಲ್ಯ ಕಾಪಾಡಲಾಗಿದ್ದು, ಆಹಾರದ ಗುಣಮಟ್ಟವೂ ಉತ್ತಮವಾಗಿದೆ ಎಂದು ತಿಳಿದುಬಂದಿದೆ. ಮಕ್ಕಳ ಆರೋಗ್ಯದ ದೃಷ್ಟಿಯಿಂದ ಗು ಣಮಟ್ಟದಲ್ಲಿ ಯಾವುದೇ ರಾಜಿ ಮಾಡಿಕೊಳ್ಳಬಾರದು" ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಶಾಲೆಯ ಉಪ ಪ್ರಾಂಶುಪಾಲರಾದ ಸುಧಾಕರ ಸಂಜೀವ, ರೇಖಾದೇವಿ, ಬಂಡೆಮ್ಮ, ಮಂಜುಳಾ ಹಿರೇಮಠ, ರಜನಿ, ಶೇಖ್ ಹುಸೇನ್, ಚನ್ನಬಸವರಾಜ, ಪ್ರಮೋದ ಕುಮಾರ, ಶ್ರೀಮತಿ ಕಟ್ಟಿ, ನುಜರತ್ ಫಾತಿಮಾ, ಅನ್ವರ್ ಹುಸೇನ್, ಶರಣಮ್ಮ, ಜಯಭೀಮ ಭಾವಿಕಟ್ಟಿ, ಶರತ್ ಕುಮಾರ್, ರಾಜಶೇಖರ. ಎಚ್, ರೇಣುಕಾ ಇದ್ದರು.

# ಹಾಸ್ಟೆಲ್ ಸಮಸ್ಯೆಗಳ ಪರಿಹಾರಕ್ಕೆ ಎಸ್‌ಎಫ್‌ಐ ಒತ್ತಾಯ




**ಕಲಬುರಗಿ,ಜೂ.18–** ಸಮಾಜ ಕಲ್ಯಾಣ ಇಲಾಖೆ ಅಡಿಯಲ್ಲಿ ನಡೆಯುತ್ತಿರುವ ಬಾಲಕರ ಮೆಟ್ರಿಕ್ ನಂತರದ ಹಾಸ್ಟೆಲ್‌ಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕು ಎಂದು ಆಗ್ರಹಿಸಿ ಭಾರತ ವಿದ್ಯಾರ್ಥಿ ಫೆಡರೇಷನ್ ಜಿಲ್ಲಾ ಸಮಿತಿ ನೇತೃತ್ವದಲ್ಲಿ ಸಮಾಜ ಕಲ್ಯಾಣ ಇಲಾಖೆ ಕಚೇರಿ ಮುಂದೆ ಪ್ರತಿಭಟನೆ ನಡೆಸಲಾಯಿತು.

ಈ ಸಂದರ್ಭದಲ್ಲಿ ಎಸ್‌ಎಫ್‌ಐ ಜಿಲ್ಲಾ ಕಾರ್ಯದರ್ಶಿ ಸುಜಾತ ವೈ ಅವರು ಮಾತನಾಡಿ, ಸಮಾಜ ಕಲ್ಯಾಣ ಇಲಾಖೆ ಅಡಿಯಲ್ಲಿ ನಡೆಯುತ್ತಿರುವ ಬಾಲಕರ ಮೆಟ್ರಿಕ್ ನಂತರದ ಹಾಸ್ಟೆಲ್‌ಗಳಿಗೆ ಕನಿಷ್ಠ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಇಲಾಖೆ ವಿಫಲವಾಗಿದೆ. ಶುದ್ಧ ಕುಡಿಯುವ ನೀರಿಲ್ಲ ಬಾತ್ರೂಮಿಗೆ ಬಳಸುವ ನೀರನ್ನು ಅಡಿಗೆಗೆ 2ನೇ ಪುಟಕ್ಕೆ

# ದುಗನೂರಿನಲ್ಲಿ 15ನೇ ಹಣಕಾಸು ಯೋಜನೆಯ ಸಾಮಾಜಿಕ ಲೆಕ್ಕಪರಿಶೋಧನಾ ಗ್ರಾಮಸಭೆ

**ರಾಯಚೂರು, ಜೂ.18–** ರಾಯಚೂರು ತಾಲೂಕಿನ ಗಿಲ್ಲೆಸೂಗೂರು ಗ್ರಾಮ ಪಂಚಾಯತಿ ವ್ಯಾಪ್ತಿಯ ದುಗನೂರು ಗ್ರಾಮದ ವಾಲ್ಮೀಕಿ ವೃತ್ತದ ಬಳಿ 2024-25ನೇ ಸಾಲಿನ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಕೈಗೊಂಡಿರುವ ಕಾಮಗಾರಿಗಳು ಮತ್ತು 15ನೇ ಹಣಕಾಸು ಯೋಜನೆಯ ಖರ್ಚು ವೆಚ್ಚಗಳ ಕುರಿತು ಸಾಮಾಜಿಕ ಲೆಕ್ಕಪರಿಶೋಧನಾ ಗ್ರಾಮಸಭೆಯನ್ನು ಬುಧವಾರ ಯಶಸ್ವಿಯಾಗಿ ನಡೆಸಲಾಯಿತು.

ಜಿಲ್ಲಾ ಅಕ್ಷರ ದಾಸೋಹ ಅಧಿಕಾರಿಗಳಾದ ಪ್ರಭುರಾಜ್ ಅವರ ಅಧ್ಯಕ್ಷತೆಯಲ್ಲಿ ಈ ಸಭೆ ಜರುಗಿತು. ಸಭೆಯಲ್ಲಿ 2ನೇ ಪುಟಕ್ಕೆ



# ಥಗ್‌ಲೈಫ್ ಚಿತ್ರ ಬಿಡುಗಡೆ : ಮುನ್ನೆಚ್ಚರಿಕೆ ಕ್ರಮವಾಗಿ ಕನ್ನಡಪರ ಸಂಘಟನೆಗಳ ನಾಯಕರಿಗೆ ನೋಟೀಸ್

**ಬೆಂಗಳೂರು,ಜೂ.18–** ಬಹುಭಾಷಾ ನಟ ಕಮಲ್‌ಹಾಸನ್ ಅವರ ನಟನೆಯ ಥಗ್‌ಲೈಫ್ ಚಿತ್ರ ಬಿಡುಗಡೆಯ ನಿಟ್ಟಿನಲ್ಲಿ ಮುನ್ನೆಚ್ಚರಿಕೆ ಕ್ರಮವಾಗಿ ಕನ್ನಡಪರ ಸಂಘಟನೆಗಳ ಮುಖಂಡರಿಗೆ ಪೊಲೀಸರು ನೋಟೀಸ್ ನೀಡಿದ್ದಾರೆ.

ಸುಪ್ರಿಂಕೋರ್ಟ್ ತೀರ್ಪಿನ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಥಗ್‌ಲೈಫ್ ಬಿಡುಗಡೆಗೆ ಸಿದ್ಧತೆಗಳು ನಡೆದಿವೆ. ಈ ಸಂಬಂಧಪಟ್ಟಂತೆ ಯಾವುದೇ ಅಹಿತಕರ ಘಟನೆಗಳು ನಡೆಯಬಾರದು ಎಂಬ ಕಾರಣಕ್ಕಾಗಿ ಪೊಲೀಸರು ಮುಂಜಾಗ್ರತಾ ಕ್ರಮ ಕೈಗೊಂಡಿದ್ದಾರೆ. ಕರವೇ ರಾಜ್ಯಾಧ್ಯಕ್ಷ ಪ್ರವೀಣ್‌ಶೆಟ್ಟಿ ಅವರ ಮನೆಗೆ 2ನೇಪುಟಕ್ಕೆ




# ಗ್ರೇಡ್-2 ಪಿಡಿಓಗಳಿಂದ ಅಭಿವೃದ್ಧಿ ಕುಂಠಿತ : ಜಯ ಕರ್ನಾಟಕ ರಕ್ಷಣಾ ಸೇನೆ ಆರೋಪ

**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಜೂ.18–** ತಾಲ್ಲೂಕಿನ ಬಹುತೇಕ ಗ್ರಾಮ ಪಂಚಾಯತಗಳಲ್ಲಿ ಪಿಡಿಓಗಳಿಲ್ಲದೇ ಬರಿ ಗ್ರೇಡ್ – 2 ಕಾರ್ಯದರ್ಶಿ ಕೈಗಳಲ್ಲಿ ಗ್ರಾಪಂಗಳು ಇದರಿಂದ ಅಭಿವೃದ್ಧಿ ಕುಂಠಿತಗೊಂಡಿದ್ದು, ಕೂಡಲೇ ಕ್ರಮಕ್ಕೆ ಮುಂದಾಗಬೇಕು ಎಂದು ಜಯ ಕರ್ನಾಟಕ ರಕ್ಷಣಾ ಸೇನೆ ಕಾರ್ಯಕರ್ತರು ಸಹಾಯಕ ಆಯುಕ್ತರಿಗೆ ಮನವಿ ಸಲ್ಲಿಸಿ ಆಗ್ರಹಿಸಿದರು.

ತಾಲೂಕಿನಲ್ಲಿರುವ 30 ಗ್ರಾಮ ಪಂಚಾಯತಗಳ ಪೈಕಿ ಕೇವಲ 18 ಪಂಚಾಯತಗಳಲ್ಲಿ ರೆಗ್ಯುಲರ್ ಪಿಡಿಓಗಳು ಕಾರ್ಯ ನಿರ್ವಹಿಸುತ್ತಿದ್ದಾರೆ. ಉಳಿದೆಡೆ ಕಾರ್ಯದರ್ಶಿಗಳಿಗೇ ಪಿಡಿಓ ಜವಾಬ್ದಾರಿ ವಹಿಸಲಾಗಿದೆ. ಇದರಿಂದ ಸ್ಥಾಲಕ್ಕೆ ಅಭಿವೃದ್ಧಿ ಕೆಲಸಗಳು ಆಗುತ್ತಿಲ್ಲ. ಗ್ರಾಮೀಣ ಪ್ರದೇಶದಲ್ಲಿ ನರೇಗಾ



ಕಾಮಗಾರಿಗಳು ಹಳ್ಳ ಹಿಡಿದಿವೆ. ಗ್ರಾಮಗಳಲ್ಲಿ ಚರಂಡಿ, ರಸ್ತೆ, ವಿದ್ಯುತ್ ಸೇರಿ ಮೂಲ ಸವಲತ್ತು ಮೂಲೆಗುಂಪಾಗಿವೆ. ಕಾರ್ಯದರ್ಶಿಗಳಿಗೆ ಪಿಡಿಓ ಪ್ರಭಾರ ವಹಿಸುವ 2ನೇ ಪುಟಕ್ಕೆ

# ಮಳೆಗೆ ಕೊಚ್ಚಿ ಹೋದ ನಲ್ಗಂದಿನ್ನಿ ಗ್ರಾಮದ ಕರೆಹಳ್ಳ ಸೇತುವೆ

**ಯುವ ಮಾರ್ಗ ಸುದ್ದಿ**

**ಮಾನ್ವಿ,ಜೂ.18–** ತಾಲೂಕಿನ ನಲ್ಗಂದಿನ್ನಿ ಗ್ರಾಮದ ಹತ್ತಿರ ಇರುವ ಕರೆಹಳ್ಳಕ್ಕೆ ಇತ್ತೀಚಿಗೆ ಸುರಿದ ಮಳೆಯಿಂದ ಹೆಚ್ಚಿನ ನೀರಿನ ಹರಿವು ಉಂಟಾಗಿ ಕರೆಹಳ್ಳದ ಸೇತುವೆಗೆ ಹೆಚ್ಚಿನ ಹಾನಿಯಾಗಿದ್ದು ಸೇತುವೆಗೆ ಬೊಂಗು ಬಿದ್ದಿರುವುದರಿಂದ ವಾಹನ ಸಂಚಾರಕ್ಕೆ ತೀವ್ರವಾದ ತೊಂದರೆಯಾಗುತ್ತಿದೆ. ಈ ಭಾಗದ ಚೀಕಲಪರ್ವಿ, ಜಾಗೀರಪನ್ನೂರು ಗ್ರಾಮದ ಜನರು ಪೋತ್ನಾಳ್ ಪಟ್ಟಣಕ್ಕೆ ಹೋಗುವುದಕ್ಕೆ ಹಾಗೂ ದೇವಿಪುರ ,ಖರಾಬದಿನ್ನಿ ಸೇರಿದಂತೆ ಈ ಭಾಗದ ಗ್ರಾಮದ ಜನರು ಚೀಕಲಪರ್ವಿ ಗ್ರಾಮಕ್ಕೆ ಹಾಗೂ ಮಾನ್ವಿ ಪಟ್ಟಣಕ್ಕೆ ಹೋಗುವುದಕ್ಕೆ ಈ ರಸ್ತೆ ಸಮೀಪದ ರಸ್ತೆಯಾಗಿರುವುದರಿಂದ ಹೆಚ್ಚಿನ ಜನರು ಈ ರಸ್ತೆಯ ಮೂಲಕ ಪ್ರತಿನಿತ್ಯ ಸಂಚಾರ ಮಾಡುತ್ತಾರೆ .ಮಳೆಯಿಂದಾಗಿ ಸೇತುವೆ ಹಾಳಾಗಿರುವುದರಿಂದ

ಈ ಭಾಗದ 100 ಹೆಚ್ಚು ವಿದ್ಯಾರ್ಥಿಗಳು ವಿದ್ಯಾಭ್ಯಾಸಕ್ಕಾಗಿ ನಿತ್ಯ ಶಾಲಾ ಕಾಲೇಜುಗಳಿಗೆ ಪೋತ್ನಾಳ – ಮಾನ್ವಿ ಪಟ್ಟಣಕ್ಕೆ ಹೋಗುತ್ತಾರೆ. ಆದರೆ ತಿಂಗಳಿಂದ ಬಸ್ ಸಂಚಾರ ರದ್ದಾಗಿದ್ದು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಪರದಾಡುವ ಸ್ಥಿತಿ ನಿರ್ಮಾಣವಾಗಿದೆ.



ಈ ರಸ್ತೆಯಲ್ಲಿ ನಿತ್ಯ ಹಲವಾರು ವಾಹನಗಳು ಸಂಚರಿಸುತ್ತವೆ. ಅಲ್ಲದೇ ಇದು ಹಳ್ಳದ ಸೇತುವೆಯಾಗಿದ್ದು, ಪಕ್ಕದಲ್ಲಿ ಹಳ್ಳವಿದೆ. ಸ್ವಲ್ಪ ಆಯ ತಪ್ಪಿದರೂ, ವಾಹನಗಳು ಕೆಳಗೆ ಉರುಳಿ ಬೀಳುತ್ತವೆ. ಇಷ್ಟೆಲ್ಲ ಗಂಭೀರ ಪರಿಸ್ಥಿತಿ ಇದ್ದರೂ, ಅಧಿಕಾರಿಗಳು ಮಾತ್ರ ಎಚ್ಚೆತ್ತುಕೊಳ್ಳುತ್ತಿಲ್ಲ ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದರು. ಶ್ರೀಘ್ರ ಸಂಬಂಧಪಟ್ಟ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಂಡು,ರಸ್ತೆಯ ಸೇತುವೆ ದುರಸ್ತಿ ಮಾಡಬೇಕು. ಹಾಗೂ ಮುಂದಿನ ದಿನಗಳಲ್ಲಿ ನೂತನ ಸೇತುವೆ ನಿರ್ಮಿಸುವಂತೆ ಈ ಭಾಗದ ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರಿಗೆ ಬಸ್ ಸೌಕರ್ಯ ಒದಗಿಸಿ ಕೊಡಬೇಕು ನಿರ್ಲಕ್ಷ್ಯವಹಿಸಿದಲ್ಲಿ ಪೋತ್ನಾಳ ಹೆದ್ದಾರಿ ರಸ್ತೆ ತಡೆದು ಪ್ರತಿಭಟನೆ ನಡೆಸಲಾಗುವುದು ಎಂದು ಈ ಭಾಗದ ಗ್ರಾಮಗಳ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು ಜನರು ಎಚ್ಚರಿಸಿದ್ದಾರೆ.

**ನಲ್ಗಂದಿನ್ನಿ ಗ್ರಾಮದ ಹತ್ತಿರ ಇರುವ ಕರೆಹಳ್ಳದ ಸೇತುವೆ ಶಿಥಿಲವಾಗಿರುವುದರಿಂದ ದುರಸ್ತಿ ಮಾಡುವಂತೆ ಅನೇಕ ಬಾರಿ ಅಧಿಕಾರಿಗಳಿಗೆ ಮನವಿ ಮಾಡಿದರು ಕೂಡ ಅಧಿಕಾರಿಗಳು ಸ್ಪಂದಿಸುತ್ತಿಲ್ಲ. ಸೇತುವೆ ತಳಮಟ್ಟದಲ್ಲಿರುವುದರಿಂದ ಸ್ವಲ್ಪ ಮಳೆ ಬಂದರು ಕೂಡ ಸೇತುವೆಯ ಮೇಲೆ ನೀರು ತುಂಬಿ ಹರಿಯುವುದರಿಂದ ಮಳೆಗಾಲದಲ್ಲಿ ಸೇತುವೆ ದಾಟುವ ದ್ವಿಚಕ್ರವಾಹನ ಸವಾರರಿಗೆ , ಪಾದಚಾರಿಗಳಿಗೆ ಸೇತುವೆಯಲ್ಲಿ ಗುಂಡಿ ಬಿದ್ದಿರುವುದು ತಿಳಿಯದೆ ಪ್ರಾಣಪಾಯ ಉಂಟಾಗುವ ಸಂಭವ ಹೆಚ್ಚಾಗಿರುವುದರಿಂದ ಕೂಡಲೆ ಕರೆಹಳ್ಳದ ಸೇತುವೆಯನ್ನು ತಾತ್ಕಲಿಕವಾಗಿ ದುರಸ್ತಿ ಮಾಡಬೇಕು.**

**– ಅಮರೇಶ ನಾಯಕ, ನಲ್ಗಂದಿನ್ನಿ ಗ್ರಾಮಸ್ಥ**



## ಮೊದಲನೇಯ ಪುಟದಿಂದ

# ಮನೆ ಮನೆಗೆ ಇ-ಖಾತಾ

ನೀಡುವ ವಿಚಾರವಾಗಿ ಸಭೆಯಲ್ಲಿ ಚರ್ಚೆ ನಡೆಸಲಾ ಯಿತು. ಸಂಪುಟ ಸಭೆಯಲ್ಲಿ ಈ ಬಗ್ಗೆ ಚರ್ಚೆಗಳನ್ನು ಮಾಡಿದ್ದೇವೆ. ಕಾನೂನು ಆಯಾಮಗಳನ್ನು ನೋಡಿಕೊಂಡು ಈ ಬಗ್ಗೆ ಅಧಿಕೃತ ಘೋಷಣೆ ಮಾಡುತ್ತೇವೆ ಎಂದು ಅವರು ಹೇಳಿದರು.

**ಸ್ವಚ್ಛ ಬೆಂಗಳೂರು ಯೋಜನೆ:** ಬೆಂಗಳೂರಿನಲ್ಲಿ ಸ್ವಚ್ಛ ಬೆಂಗಳೂರು ಯೋಜನೆಯನ್ನು ಹಮ್ಮಿಕೊಳ್ಳಲಾಗುತ್ತಿದ್ದು, ಕಸ ವಿಲೇವಾರಿಗೆ ಆದ್ಯತೆ ನೀಡಿ, ಸ್ವಚ್ಛಬೆಂಗಳೂರನ್ನು ರೂಪಿಸಲಾಗುವುದು. ಬೆಂಗಳೂರಿನಲ್ಲಿ ಎಲ್ಲೇ ಕಸ ಇದ್ದರೂ ಅದನ್ನು ವಿಲೇವಾರಿ ಮಾಡುತ್ತೇವೆ. ಇದಕ್ಕಾಗಿ ಸಹಾಯವಾಣಿಯನ್ನು ಬಿಡುಗಡೆ ಮಾಡುತ್ತೇವೆ ಎಂದು ಹೇಳಿದರು.

ಸಾರ್ವಜನಿಕರು ಕಸ ಇರುವ ಜಾಗದ ಫೋಟೊ ತೆಗೆದು ಅದನ್ನು ಸಹಾಯವಾಣಿ ಸಂಖ್ಯೆಗೆ ರವಾನಿಸಿದರೆ ಒಂದುವಾರದಲ್ಲಿ ಆ ಜಾಗದಲ್ಲಿರುವ ಕಸವಿಲೇವಾರಿ ಮಾಡಲಾಗುವುದು ಎಂದು ತಿಳಿಸಿದರು.

**ರಸ್ತೆ ಗುಂಡಿ ಮುಚ್ಚಲು ಆದ್ಯತೆ:** ಬೆಂಗಳೂರಿನ ರಸ್ತೆಗಳಲ್ಲಿರುವ ಗುಂಡಿಗಳನ್ನು ಮುಚ್ಚಲು ಗಮನ ಹರಿಸಿದ್ದೇವೆ. ಶಾಸಕರುಗಳು ಸಹ ತಮ್ಮ ವಾರ್ಡ್‌ಗಳ ವ್ಯಾಪ್ತಿಯಲ್ಲಿ ರಸ್ತೆ ಕಾಮಗಾರಿಗಳಿಗೆ ಗಮನ ಹರಿಸಬೇಕು ಅನುದಾನ ಬಳಕೆ ಮಾಡಬೇಕು ಎಂದು ಹೇಳಿದರು. ಬೆಂಗಳೂರಿನ ಹಲವೆಡೆ ವೈಟ್‌ಟ್ಯಾಪಿಂಗ್ ಕೆಲಸ ನಡೆಯುತ್ತಿದೆ. ಕಾಮಗಾರಿಗಳ ಗುಣಮಟ್ಟ ಪರೀಕ್ಷೆಗಳನ್ನು ನಾನು ಖುದ್ದು ಮಾಡಿದ್ದೇನೆ ಎಂದು ಅವರು ಹೇಳಿದರು.

ಮಳೆಯಿಂದಾಗಿ ಮರ ಧರೆಗುರುಳುತ್ತಿದ್ದರೂ ಬಿಬಿಎಂಪಿ ಸುಮ್ಮನಿದೆ ಎಂಬ ವರದಿಗಳನ್ನು ತಳ್ಳಿ ಹಾಕಿದ ಅವರು, ಅಧಿಕಾರಿಗಳು ಸುಮ್ಮನೆ ಕೂತಿಲ್ಲ ಆದ್ಯತೆ ಮೇರೆಗೆ ಕೆಲಸಮಾಡುತ್ತಿದ್ದಾರೆ ಎಂದರು.

ಈ ಸಭೆಯಲ್ಲಿ ಸಚಿವರುಗಳಾದ ಕೆ.ಜೆ ಜಾರ್ಜ್, ಕೃಷ್ಣಬೈರೇಗೌಡ, ಭೈರತಿ ಸುರೇಶ್, ಜಮೀರ್‌ಅಹ್ಮದ್‌ಖಾನ್, ಶಾಸಕರುಗಳಾದ ಎಂ. ಕೃಷ್ಣಪ್ಪ, ರಿಜ್ವಾನ್ ಅರ್ಷದ್, ಎಸ್.ಟಿ ಸೋಮಶೇಖರ್, ಆನೇಕಲ್ ಶಿವಣ್ಣ, ಎಂಸಿ ಶ್ರೀನಿವಾಸ್ ಪಾಲ್ಗೊಂಡಿದ್ದರು.

**ಶೀಘ್ರ ಬಿಬಿಎಂಪಿ ಚುನಾವಣೆ:** ಗ್ರೇಟರ್ ಬೆಂಗಳೂರನ್ನು ಆದಷ್ಟು ಬೇಗ ಅಸ್ತಿತ್ವಕ್ಕೆ ತಂದು ಬಿಬಿಎಂಪಿಗೆ ಶೀಘ್ರ ಚುನಾವಣೆ ನಡೆಸಲು ತೀರ್ಮಾನ ಕೈಗೊಳ್ಳಲಾಗಿದೆ. ಉಪಮುಖ್ಯಮಂತ್ರಿ ಹಾಗೂ ಬೆಂಗಳೂರು ನಗರಾಭಿವೃದ್ಧಿ ಸಚಿವ ಡಿಕೆ ಶಿವಕುಮಾರ್ ಅಧ್ಯಕ್ಷತೆಯಲ್ಲಿಂದು ನಡೆದ ಬೆಂಗಳೂರು ವ್ಯಾಪ್ತಿಯ ಸಚಿವರು ಹಾಗೂ ಕಾಂಗ್ರೆಸ್ ಶಾಸಕರ ಸಭೆಯಲ್ಲಿ ಬಿಬಿಎಂಪಿಗೆ ಆದಷ್ಟು ಬೇಗ ಚುನಾವಣೆ ನಡೆಸುವ ಒಲವು ವ್ಯಕ್ತವಾಗಿದೆ.

ಗ್ರೇಟರ್ ಬೆಂಗಳೂರು ಅಡಿಯಲ್ಲಿ 4–5 ಪಾಲಿಕೆಗಳನ್ನು ರಚನೆ ಮಾಡಿ ಚುನಾವಣೆ ನಡೆಸಿ ಎಂಬ ಸಲಹೆಗಳನ್ನು ಸಭೆಯಲ್ಲಿ ಭಾಗಿಯಾಗಿದ್ದ ಸಚಿವರು ಹಾಗೂ ಶಾಸಕರು ನೀಡಿದ್ದು, ಅದರಂತೆ ಶೀಘ್ರ ಚುನಾವಣೆ ನಡೆಸುವುದಾಗಿ ಡಿಕೆ ಶಿವಕುಮಾರ್ ಸಭೆಯಲ್ಲಿ ಹೇಳಿದರು.

# ದುಗನೂರಿನಲ್ಲಿ 15ನೇ ಹಣಕಾಸು ಯೋಜನೆಯ ಸಾಮಾಜಿಕ ಲೆಕ್ಕಪರಿಶೋಧನಾ ಗ್ರಾಮಸಭೆ

MGNREGA ಅಡಿಯಲ್ಲಿ ನಡೆದ ಕಾಮಗಾರಿಗಳ ಪ್ರಗತಿ ಮತ್ತು ಹಣಕಾಸಿನ ಬಳಕೆಯ ಬಗ್ಗೆ ಕೂಲಂಕುಷವಾಗಿ ಪರಿಶೀಲಿಸಲಾಯಿತು. ಈ ಸಂದರ್ಭದಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಸುದರ್ಶನ್, ತಾಲೂಕು ಸಾಮಾಜಿಕ ಲೆಕ್ಕ ಪರಿಶೋಧನಾ ಕೋ-ಆರ್ಡಿನೇಟರ್ ರಮೇಶ್, ಕಾರ್ಯದರ್ಶಿ ಹನುಮಂತಪ್ಪ, ಹಾಗೂ ಪವನ್ ಕುಮಾರ್ ಭೀಮರೆಡ್ಡಿ, ಪ್ರಾಣೇಶ್, ಇಮಾನುವೇಲ್ ಸೇರಿದಂತೆ ಗ್ರಾಮ ಪಂಚಾಯತಿ ಸದಸ್ಯರು, ಗ್ರಾಮದ ಹಿರಿಯರು, ಕೂಲಿ ಕಾರ್ಮಿಕರು ಮತ್ತು ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

ಸಭೆಯಲ್ಲಿ ಗ್ರಾಮಸ್ಥರು ಕಾಮಗಾರಿಗಳ ಕುರಿತು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರು. ಅಧಿಕಾರಿಗಳು ಪಾರದರ್ಶಕತೆ ಮತ್ತು ಉತ್ತರದಾಯಿತ್ವವನ್ನು ಎತ್ತಿಹಿಡಿಯುವ ನಿಟ್ಟಿನಲ್ಲಿ ಮಾಹಿತಿ ನೀಡಿದರು.

# ಹಾಸ್ಟೆಲ್ ಸಮಸ್ಯೆಗಳ ಪರಿಹಾರಕ್ಕೆ ಎಸ್‌ಎಫ್‌ಐ ಒತ್ತಾಯ

ಬಳಸಲಾಗುತ್ತಿದೆ. ಸ್ವಚ್ಛತೆ ಕಾಪಾಡಿ ಎಂದು ಸಿಬ್ಬಂದಿಗಳಲ್ಲಿ ಕೇಳಿಕೊಂಡರೆ ನಮಗೆ ಸಂಬಂಧವಿಲ್ಲ ಎನ್ನುತ್ತಾರೆ. ಹಾಸ್ಟೆಲ್ ವಾರ್ಡನ್‌ಗಳಿಗೆ ಹೇಳಿದರೆ ಹಾಸ್ಟೆಲ್ ವಾರ್ಡನ್‌ಗಳು ವಾರಕ್ಕೆ ಒಂದು, ಎರಡು ಬಾರಿ ಹಾಸ್ಟೆಲ್‌ಗೆ ಬರುತ್ತಾರೆ. ತಾಲೂಕು ಇಲಾಖೆ ಅಧಿಕಾರಿಗಳು ಕಳೆದ ಮೂರು ವರ್ಷಗಳಿಂದ ಹಾಸ್ಟೆಲ್‌ಗೆ ಭೇಟಿ ನೀಡಿಲ್ಲ. ಹಾಸ್ಟೆಲ್‌ನ ಕೆಲ ವಿದ್ಯಾರ್ಥಿಗಳು ಹೊರಗಿನ ಯುವಕರನ್ನು ಹಾಸ್ಟೆಲ್‌ಗೆ ಕರೆಸಿಕೊಂಡು ಮದ್ಯಪಾನ, ಧೂಮಪಾನದಂತಹ ಕೆಟ್ಟ ಚಟಗಳಿಗೆ ಹಾಸ್ಟಲ್ ರೂಮ್‌ಗಳನ್ನು ಬಳಸಿಕೊಳ್ಳುತ್ತಿದ್ದಾರೆ. ಕೆಲ ಸಿಬ್ಬಂದಿಗಳು ಕೂಡ ಸಾಥ್ ನೀಡುತ್ತಾರೆ. ಮೂಲಭೂತ ಸೌಕರ್ಯ ಇಲ್ಲದೆ ವಿದ್ಯಾರ್ಥಿಗಳು ಪರದಾಡುತ್ತಿದ್ದಾರೆ. ಸುಮಾರು ವರ್ಷಗಳಿಂದ ಹಾಸ್ಟೆಲ್‌ಗಳಿಗೆ ಪೇಂಟಿಂಗ್, ಆಟದ ಸಾಮಗ್ರಿಗಳು ಇಲ್ಲ. ಊಟದ ವೇಳಾಪಟ್ಟಿಯಂತೆ ಊಟ ನೀಡದೇ ಇರುವುದರಿಂದ ವಿದ್ಯಾರ್ಥಿಗಳಿಗೆ ತುಂಬಾ ತೊಂದರೆಯಾಗುತ್ತಿದೆ. ಈ ಎಲ್ಲ ಸಮಸ್ಯೆಗಳನ್ನು ಪರಿಹಾರ ಮಾಡಬೇಕೆಂದು ಆಗ್ರಹಿಸಿದರು. ನಂತರ ಸಮಾಜ ಕಲ್ಯಾಣ ಇಲಾಖೆಯ ತಾಲೂಕು ಅಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಲಾಯಿತು.

# ಥಗ್‌ಲೈಫ್ ಚಿತ್ರ ಬಿಡುಗಡೆ : ಮುನ್ನೆಚ್ಚರಿಕೆ ಕ್ರಮವಾಗಿ ಕನ್ನಡಪರ ಸಂಘಟನೆಗಳ ನಾಯಕರಿಗೆ ನೋಟೀಸ್

ಪೊಲೀಸರು ನೋಟೀಸ್ ಅಂಟಿಸಿದ್ದಾರೆ. ಪೊಲೀಸರ ನೋಟೀಸ್ ಸ್ವಿಕರಿಸಲು ಪ್ರವೀಣ್‌ಶೆಟ್ಟಿ ನಿರಾಕರಿಸಿದ್ದು, ಯಾರಾದರೂ ಥಿಯೇಟರ್‌ಗೆ ಬೆಂಕಿ ಹಚ್ಚಿದರೆ ನಾವು ಹೊಣೆಯಾಗಲು ಸಾಧ್ಯವೇ, ನಾನು ನೋಟೀಸ್ ತೆಗೆದುಕೊಳ್ಳುವುದಿಲ್ಲ. ನೀವು ಕಾನೂನಿನ ಪ್ರಕಾರ ಕಾಂಪೌಂಡ್‌ಗೆ ನೋಟೀಸ್ ಅಂಟಿಸಿದ್ದೀರ. ಇದಕ್ಕೆ ನನ್ನ ವಿರೋಧವಿಲ್ಲ ಎಂದು ಹೇಳಿದ್ದಾರೆ.

ಕಮಲ್‌ಹಾಸನ್ ಹೇಳಿಕೆ ವಿರುದ್ಧ ಕ್ರಮ ಕೈಗೊಳ್ಳುವಂತೆ ನಾವು ಪೊಲೀಸ್ ಠಾಣೆಗೆ ದೂರು ನೀಡಿದ್ದೆವು. ಅದರ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ ಅವರು ನ್ಯಾಯಾಲಯಕ್ಕೆ ಹೋಗುವ ಮುನ್ನವೇ ನಾವು ದೂರು ನೀಡಿದ್ದೆವು. ಅದಕ್ಕೆ ಯಾವ ಕ್ರಮವನ್ನೂ ಕೈಗೊಂಡಿಲ್ಲ. ಹೈಕೋರ್ಟ್ ಸೂಚನೆ ಹೊರತಾಗಿಯೂ ಅವರು ಕ್ಷಮೆ ಕೇಳಿಲ್ಲ. ಹೀಗಾದರೆ ಕನ್ನಡ ಹಾಗೂ ಕನ್ನಡ ಹೋರಾಟದ ಕತೆಯೇನು ಎಂದು ಪ್ರವೀಣ್‌ಶೆಟ್ಟಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಹೋರಾಟಕ್ಕೆ ನಾವೇ ಇನ್ನೂ ಸಿದ್ಧವಾಗಿಲ್ಲ. ಅದಕ್ಕೂ ಮೊದಲೇ ಪೊಲೀಸರು ನೋಟೀಸ್ ನೀಡಿದ್ದಾರೆ. ಹೀಗಾದರೆ ಮುಂದಿನ ದಿನಗಳಲ್ಲಿ ಕನ್ನಡ ಭಾಷೆಯ ಸ್ಥಿತಿಗತಿಯೇನು?, ನಾವು ಹಲವು ಠಾಣೆಗಳಿಗೆ ನೀಡಿರುವ ದೂರನ್ನು ಆಧರಿಸಿ ಪ್ರಕರಣ ದಾಖಲಿಸುವ ಕೆಲಸವಾಗಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ನಾವು ಎಲ್ಲಿಯೂ ಕಲ್ಲು ಹೊಡೆಯುವುದಿಲ್ಲ, ಬೆಂಕಿ ಹಚ್ಚುವುದಿಲ್ಲ, ಕಲ್ಲು ಹೊಡೆಯಲು ಆಗುವುದಿಲ್ಲ ಎಂದಾದ ಮೇಲೆ ಕನಿಷ್ಠ ಪಕ್ಷ ಸೊಲ್ಲನ್ನಾದರೂ ಎತ್ತಬೇಕು. ಅದಕ್ಕೂ ಅವಕಾಶ ಇಲ್ಲ ಎಂದರೆ ಹೇಗೆ? ಎಂದು ಪ್ರಶ್ನಿಸಿದರು.ಯಾವ ರೀತಿ ಹೋರಾಟ ನಡೆಯುತ್ತದೆ ಎಂಬ ಬಗ್ಗೆ ನಾವು ಪೊಲೀಸರಿಗೆ ಪೂರ್ವ ಮಾಹಿತಿ ನೀಡುತ್ತೇವೆ. ಅಗತ್ಯವಿರುವ ಎಲ್ಲಾ ಸಹಕಾರಗಳನ್ನು ನೀಡುತ್ತೇವೆ ಎಂದು ಹೇಳಿದರು.

ಪೊಲೀಸರು ಕನ್ನಡಪರ ಸಂಘಟನೆಗಳ ಹಾಗೂ ಅದರ ಮುಖಂಡರುಗಳ ಮನೆಗಳಿಗೆ ನೋಟೀಸ್ ತಲುಪಿಸಿದ್ದು, ಥಗ್‌ಲೈಫ್ ಚಿತ್ರ ಬಿಡುಗಡೆಯ ಹಿನ್ನೆಲೆಯಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆದರೆ ಸಂಘಟನೆಯ ಮುಖಂಡರೇ ಹೊಣೆಯಾಗಬೇಕಾಗುತ್ತದೆ, ಎಚ್ಚರಿಕೆ ಎಂದಿದ್ದಾರೆ.ಬೆಂಗಳೂರಿನ ಫ್ರಿಡಂ ಪಾರ್ಕ್‌ನಲ್ಲಿ ಹೋರಾಟಕ್ಕೆ ಅವಕಾಶವಿದೆ. ಅದಕ್ಕೆ ಹೊರತಾಗಿ ಬೇರೆ ರೀತಿಯ ಪ್ರತಿಭಟನೆಗಳು ವ್ಯಕ್ತವಾಗಬಾರದು ಎಂಬ ಕಾರಣಕ್ಕೆ ಬಿಗಿ ಬಂದೋಬಸ್ತ್ ಕೈಗೊಳ್ಳಲಾಗಿದೆ. ಕಾನೂನು ಸುವ್ಯವಸ್ಥೆ ಪಾಲನೆಗೆ ಇಂತಹ ಕ್ರಮಗಳು ಅನಿವಾರ್ಯ ಎಂದು ಸರ್ಕಾರ ಸಮರ್ಥಿಸಿಕೊಳ್ಳುತ್ತಿದೆ.

# ಗ್ರೇಡ್-2 ಪಿಡಿಓಗಳಿಂದ ಅಭಿವೃದ್ಧಿ ಕುಂಠಿತ : ಜಯ ಕರ್ನಾಟಕ ರಕ್ಷಣಾ ಸೇನೆ ಆರೋಪ

ನಿಯಮ ಇಲ್ಲದಾಗ್ಯೂ, ನಿಯಮ ಉಲ್ಲಂಘನೆ ಮಾಡಿ ಆದೇಶಿಸಿದ ಕ್ರಮ ಖಂಡನೀಯ. ಕೂಡಲೇ ಪರಿಶೀಲನೆ ಮಾಡಿ ಸೂಕ್ತ ಕ್ರಮಕ್ಕೆ ಮುಂದಾಗಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಸಂಘಟನೆ ತಾಲೂಕ ಅಧ್ಯಕ್ಷ ಹನುಮಂತ ನಾಯಕ, ಯುವ ಘಟಕ ಅಧ್ಯಕ್ಷ ಪ್ರವೀಣ್ ಕುಮಾರ್, ಪ್ರಕಾಶ್ ಕುರಿ, ನಿಂಗಪ್ಪ, ಮೊಹಿದ್ದೀನ್, ಆದಪ್ಪ, ಶರಣಪ್ಪ, ಲಕ್ಷ್ಮಣ, ಭೀಮರಾಯ, ಮಲ್ಲೇಶ್, ಹನೀಫ್ ,ಉಮೇಶ, ಮಂಜುನಾಥ, ಹನುಮಗೌಡ, ಅಮರೇಗೌಡ, ಸಂದೀಪ್, ಅಂತೋಣಿ, ಆದಪ್ಪ ನಾಯಕ ಸೇರಿದಂತೆ ಇದ್ದರು.

# ಬಿಜೆಪಿ ರಾಜ್ಯಾಧ್ಯಕ್ಷರಾಗಿ ಬಿ.ವೈ ವಿಜಯೇಂದ್ರ ಮುಂದುವರಿಕೆ ಖಚಿತ..?

**ಬೆಂಗಳೂರು,ಜೂ.18–** ಕರ್ನಾಟಕ ಬಿಜೆಪಿ ಘಟಕದ ರಾಜ್ಯಾಧ್ಯಕ್ಷರಾಗಿ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂ ರಪ್ಪನವರ ಪುತ್ರ ಬಿ.ವೈ.ವಿಜಯೇಂದ್ರ ಅವರೇ ಮುಂದುವರಿಯು ವುದು ಬಹುತೇಕ ಖಚಿತವಾಗಿದೆ. ಕೆಲವು ತಿಂಗಳಿನಿಂದ ಸದ್ದಿಲ್ಲದೆ ಬಿಜೆಪಿ ಶಾಸಕರ ಅಭಿಪ್ರಾಯ ವನ್ನು ಉಸ್ತುವಾರಿ ರಾಧ ಮೋಹನ್‌ದಾಸ್ ಆಗರ್ ವಾಲ್ ಆಲಿಸಿದ್ದರು.



ಅದರಲ್ಲಿ ನಾಲ್ಕೈದು ಶಾಸಕ ರನ್ನು ಹೊರತುಪಡಿಸಿ,ಎಲ್ಲರೂ ವಿಜಯೇಂದ್ರ ಪರವಾಗೇ ಕೈಯೆತ್ತಿದ್ದರು. ಇನ್ನು ಜಿಲ್ಲಾಧ್ಯಕ್ಷರ ಆಯ್ಕೆಯೂ ಅದೇ ರೀತಿ ಆಗಿರುವುದರಿಂದ, ಸದ್ಯದ ಮಟ್ಟಿಗೆ ಯಾವುದೇ ರಿಸ್ಕ್ ತೆಗೆದುಕೊಳ್ಳಲು ಬಿಜೆಪಿ ನಾಯಕರು ಬಯಸುತ್ತಿಲ್ಲ. ಇನ್ನು ಅಕ್ಟೋಬರ್ ನವೆಂಬರ್ ನಲ್ಲಿ ಬಿಹಾರದ ವಿಧಾನ ಸಭಾ ಚುನಾವಣೆ ನಡೆಯತ್ತಿರುವುದರಿಂದ, ಕೇಂದ್ರದ ನಾಯಕರು ಅಲ್ಲಿನ ರಾಜಕೀಯದ ವಿಚಾರಕ್ಕೆ ಬ್ಯುಸಿಯಾಗಲಿದ್ದಾರೆ. ಜೊತೆಗೆ, ಇತ್ತೀಚೆಗೆ ಹೊರಬಿದ್ದಿರುವ ಕೆಲವೊಂದು ಸಮೀಕ್ಷೆಗಳು ಎನ್‌ಡಿಎ ಮೈತ್ರಿಕೂಟಕ್ಕೆ ಪೂರಕವಾಗಿರದೇ ಇರುವ ಹಿನ್ನೆಲೆಯಲ್ಲಿ ಅಲ್ಲಿಗೆ ವಿಶೇಷ ಒತ್ತನ್ನು ನೀಡಬೇಕಿದೆ.

ಹೀಗಾಗಿ ಕರ್ನಾಟಕದ ಬಿಜೆಪಿ ಅಧ್ಯಕ್ಷರಾಗಿ ವಿಜಯೇಂದ್ರ ಅವರನ್ನು ಮುಂದಿನ ಮೂರು ವರ್ಷಗಳ ಅವಧಿಗೆ ಮುಂದುವರೆಸಲು ವರಿಷ್ಠರು ಬಯಸಿದ್ದಾರೆ. ಸದ್ಯದಲ್ಲೆ ಅಧಿಕೃತ ಘೋಷಣೆ ಹೊರಬೀಳಲಿದೆ. ಎಲ್ಲವೂ ಅಂದುಕೊಂಡಂತೆ ಆದರೆ, ತಿಂಗಳಾಂತ್ಯದೊಳಗೆ ಅಧಿಕೃತವಾಗಿ ಘೋಷಣೆಯಾಗಬಹುದು.

ಕರ್ನಾಟಕದ ಎಲ್ಲಾ 39 (ಬಿಜೆಪಿಯ ಸಂಘಟನಾತ್ಮಕ ಜಿಲ್ಲೆಗಳು) ಜಿಲ್ಲೆಗಳಿಗೆ ಅಧ್ಯಕ್ಷರ ನೇಮಕ ಪ್ರಕ್ರಿಯೆ ಮುಕ್ತಾಯಗೊಂಡಿದೆ. ಆ ಮೂಲಕ, ಜಿಲ್ಲಾಧ್ಯಕ್ಷರ ಆಯ್ಕೆಯಲ್ಲಿ ವಿಜಯೇಂದ್ರ ಸ್ಪಷ್ಟ ಮೇಲುಗೈ ಸಾಧಿಸಿದ್ದಾರೆ. ರಾಜ್ಯಾಧ್ಯಕ್ಷರ ನೇಮಕಕ್ಕೆ ಇದು ಬಹುಮುಖ್ಯವಾದ ಪ್ರಕ್ರಿಯೆಯಾಗಿದೆ. ಮೂಲಗಳ ಪ್ರಕಾರ, ಕೇಂದ್ರ ಗೃಹ ಸಚಿವ ಶಿವರಾಜ್ ಸಿಂಗ್ ಚೌಹಾಣ್, ಕರ್ನಾಟಕಕ್ಕೆ ಬಂದು ಅಧಿಕೃತ ಘೋಷಣೆಯನ್ನು ಮಾಡಲಿದ್ದಾರೆ.

ಇದು ಬಹಳ ಹಿಂದೆಯೇ ಆಗಬೇಕಾಗಿತ್ತು, ಆದರೆ ಕರ್ನಾಟಕ ಬಿಜೆಪಿ ಘಟಕದಲ್ಲಿ ಮನೆಯೊಂದು ಹಲವು ಬಾಗಿಲುಗಳು ಇರುವ ಹಿನ್ನೆಲೆಯಲ್ಲಿ ಬಿಜೆಪಿ ವರಿಷ್ಠರು ಅಳೆದುತೂಗಿ ಘೋಷಣೆ ಮಾಡುವ ನಿರ್ಧಾರಕ್ಕೆ ಬಂದಿದ್ದಾರೆ. ದಕ್ಷಿಣದ ರಾಜ್ಯದಲ್ಲಿ ಬಿಜೆಪಿ ಬಲಿಷ್ಠ ಎಂದು ಇರುವುದು ಕರ್ನಾಟಕದಲ್ಲಿ. ಹಾಗಾಗಿ, ಇರುವ ಹಿಡಿತವನ್ನು ಕಳೆದುಕೊಳ್ಳಲು ಅಮಿತ್ ಶಾ ಸಿದ್ಧರಿಲ್ಲ. ಬಿಜೆಪಿ ನಡೆಸಿದ ಆಂತರಿಕ ಸಮೀಕ್ಷೆಯಲ್ಲೂ ವಿಜಯೇಂದ್ರ ಮೇಲುಗೈ ಸಾಧಿಸಿದ್ದರು. ಕೇಂದ್ರ ಗೃಹ ಸಚಿವ ಅಮಿತ್ ಶಾ ಇಬ್ಬರಲ್ಲಿ ಒಬ್ಬರನ್ನು ರಾಜ್ಯಾಧ್ಯಕ್ಷ ಹುದ್ದೆಯಲ್ಲಿ ಕೂರಿಸಲು ಸಿದ್ಧತೆಯನ್ನು ಮಾಡಿಕೊಂಡಿದ್ದರು ಎಂದು ಹೇಳಲಾಗುತ್ತಿದೆ. ಆದರೆ, ಸದ್ಯದ ಮಟ್ಟಿಗೆ ಅದನ್ನು ಕಾರ್ಯರೂಪಕ್ಕೆ ತರದೇ ಇರಲು ನಿರ್ಧರಿಸಿ, ಆರೇಳು ತಿಂಗಳು ಮುಂದಕ್ಕೆ ಹಾಕಲು ಶಾ ನಿರ್ಧರಿಸಿದ್ದಾರೆ ಎನ್ನುವ ಮಾತುಗಳು ಕೇಳಿ ಬರುತ್ತಿದೆ.

ಮಾಜಿ ಸಚಿವ ಮತ್ತು ಕರ್ನಾಟಕದಲ್ಲಿ ಬಿಜೆಪಿ ಸರ್ಕಾರ ಇದ್ದಾಗಿಂದಲೂ ಅಮಿತ್ ಶಾ ಅವರ ಆಪ್ತ ವಲಯದಲ್ಲಿ ಗುರುತಿಸಿಕೊಂಡಿದ್ದ ಮುರುಗೇಶ್ ನಿರಾಣಿಯವರನ್ನು ಅಧ್ಯಕ್ಷ ಸ್ಥಾನದಲ್ಲಿ ಕೂರಿಸುವ ನಿರ್ಧಾರಕ್ಕೆ ಅಮಿತ್ ಶಾ ಬಹುತೇಕ ಬಂದಿದ್ದರು ಎಂದು ಹೇಳಲಾಗುತ್ತಿದೆ. ಈ ಬಗ್ಗೆ, ಅವರಿಗೆ ಕಮಿಟೆಂಟ್ ಕೂಡಾ ಮಾಡಿದ್ದರು ಎನ್ನುವ ಸುದ್ದಿಯಿದೆ.

ಇನ್ನೊರ್ವ ಕೇಂದ್ರ ಸಚಿವರಾದ ಲಿಂಗಾಯತ ಸಮುದಾಯದ ವಿ.ಸೋಮಣ್ಣ ಕೂಡಾ ರಾಜ್ಯಾಧ್ಯಕ್ಷ ಹುದ್ದೆಯನ್ನು ಬಯಸಿದ್ದರು ಎನ್ನುವ ಮಾಹಿತಿಯಿದೆ. ಅವರ ಆಯ್ಕೆಯ ಬಗ್ಗೆಯೂ, ಅಮಿತ್ ಶಾಗೆ ಏನೂ ತಕರಾರು ಇರಲಿಲ್ಲ. ಆದರೆ, ಕೇಂದ್ರದ ಸಂಪುಟದಲ್ಲಿ ಚುರುಕಿನಿಂದ ಕೆಲಸ ಮಾಡುತ್ತಿರುವ ಸೋಮಣ್ಣಗೆ ತೋಡಾ ದಿನ್ ರುಕ್ ಜಾಯಿಯೇಟ್ ( ಸ್ವಲ್ಪ ದಿನ ಕಾಯಿರಿ) ಎನ್ನುವ ಸೂಚನೆ, ಅಮಿತ್ ಶಾ ಕಡೆಯಿಂದ ಬಂದಿದೆ ಎನ್ನುವ ಸುದ್ದಿ ಹರಿದಾಡುತ್ತಿದೆ.

ವಿಜಯೇಂದ್ರ ಹೊರತಾಗಿ, ಅಮಿತ್ ಶಾ ತಲೆಯಲ್ಲಿದ್ದ ಮುರುಗೇಶ್ ನಿರಾಣಿ ಮತ್ತು ವಿ.ಸೋಮಣ್ಣ ಇಬ್ಬರೂ ಲಿಂಗಾಯತ ಸಮುದಾಯದ ನಾಯಕರೇ ಆಗಿದ್ದರೂ, ಸದ್ಯದ ಮಟ್ಟಿಗೆ ವಿಜಯೇಂದ್ರ ಅವರನ್ನೆ ಮುಂದುವರಿಸಲು ಕೇಂದ್ರದ ಬಿಜೆಪಿ ನಾಯಕರು ನಿರ್ಧರಿಸಿದ್ದಾರೆ. ರಾಜ್ಯ ಉಸ್ತುವಾರಿ ರಾಧಾ ಮೋಹನದಾಸ್ ಅಗರ್ವಾಲ್ ಕೂಡಾ ಇದೇ ವರದಿಯನ್ನು ಕೇಂದ್ರಕ್ಕೆ ನೀಡಿದ್ದಾರೆಂದು ಹೇಳಲಾಗುತ್ತಿದೆ.

# ಭೂ ದಾಖಲೆಗಳ ಡಿಜಿಟಲೀಕರಣ ಸದುಪಯೋಗ ಪಡಿಸಿಕೊಳ್ಳಿ

**ನವಲಗುಂದ,ಜೂ. 18–** ಸುರಕ್ಷಾ ಯೋಜನೆಯಡಿ ಸಾರ್ವಜನಿಕರ ಹಳೆಯ ಭೂ ದಾಖಲೆಗಳು ನಾಶವಾಗದಂತೆ ಶಾಶ್ವತವಾಗಿ ಉಳಿಯಲು ಡಿಜಿಟಲೀಕರಣ ಗೊಳಿಸುವಲ್ಲಿ ನವಲಗುಂದ ತಾಲ್ಲೂಕು ಜಿಲ್ಲೆಯಲ್ಲಿ ಮುಂಚೂಣಿಯಲ್ಲಿರುವುದು ಶ್ಲಾಘನಾರ್ಹ' ಎಂದು ಶಾಸಕ ಎನ್ ಎಚ್ ಕೋನರಡ್ಡಿ ಹೇಳಿದರು. ಅವರು ಇಲ್ಲಿನ ತಹಶೀಲ್ದಾರ್ ಕಚೇರಿಯಲ್ಲಿ ನೂತನವಾಗಿ ನಿರ್ಮಿಸಲಾದ ದಾಖಲೆ ವಿಭಾಗವನ್ನು ಉದ್ಘಾಟಿಸಿ, ಸಾರ್ವಜನಿಕರಿಗೆ ಡಿಜಟಲೀಕರಣ ಭೂ ದಾಖಲೆಗಳನ್ನು ವಿತರಿಸಿ ಅವರು ಮಾತನಾಡಿದರು. ಈ ಮೊದಲು ಭೂಮಿಗೆ ಸಂಬಂಧಿಸಿದ ಹಳೆಯ ದಾಖಲೆಗಳನ್ನು ಪಡೆಯಲು ಸಾರ್ವಜನಿಕರು ತಿಂಗಳುಗಟ್ಟಲೆ ಕಚೇರಿಗೆ ಅಲೆಯಬೇಕಿತ್ತು. ಡಿಜಟಲೀಕರಣಗೊಂಡ ನಂತರ ಅರ್ಜಿ ಸಲ್ಲಿಸಿದ ನಂತರ ನಿಗದಿತ ಸಮಯದೊಳಗೆ ಭೂ ದಾಖಲೆಗಳು ದೊರೆಯುತ್ತವೆ. ಸಾರ್ವಜನಿಕರು ಯೋಜನೆಯ ಸದುಪಯೋಗ ಪಡಿಸಿಕೊಳ್ಳಬೇಕು' ಎಂದರು.

ನಿಗದಿತ ಅವಧಿಯೊಳಗೆ ಕಾರ್ಯವನ್ನು ತ್ವರಿತವಾಗಿ ಪೂರ್ಣಗೊಳಿಸಿದ ತಹಶೀಲ್ದಾರರು ಹಾಗೂ ಸಂಬಂಧಿಸಿದ ಅಧಿಕಾರಗಳಿಗೆ ಅಭಿನಂದನೆಗಳನ್ನು ಸಲ್ಲಿಸಿದರು. ಇದೆ ವೇಳೆ ಮೊದಲನೆ ಹಂತವಾಗಿ ನವಲಗುಂದ ತಾಲ್ಲೂಕಿಗೆ ಸರ್ಕಾರದಿಂದ ಕೊಡಮಾಡಿದ 12 ಲ್ಯಾಪ್‌ಟಾಪ್ ಗಳನ್ನು 12 ಗ್ರಾಮ ಆಡಳಿತ ಅಧಿಕಾರಿಗಳಿಗೆ ವಿತರಣೆ ಮಾಡಿ ಉತ್ತಮ ರೀತಿಯಲ್ಲಿ ಕಾರ್ಯನಿರ್ವಹಿಸಲು ಸೂಚಿಸಿದರು.

ತಹಶೀಲ್ದಾರ ಸುಧೀರ ಸಾವಕಾರ ಮಾತನಾಡಿ ಭೂ ದಾಖಲ 'ಗಳನ್ನು ಈಗಾಗಲೇ 1275250 ಪುಟಗಳು ಸ್ಕಾನಿ ಮಾಡಿ ಅಪ್ಲೋಡ ಮಾಡಲಾಗಿದೆ ಪ್ರತಿ ದಿನ 15 ಸಾವಿರ ದಾಖಲೆಗಳನ್ನು ಸ್ಕಾ ನಿ ಮಾಡಲಾಗುತ್ತಿದೆ ಇಂದಿನಿಂದಲೇ ಸಾರ್ವಜನಿಕರು ತಹಶೀಲ್ದಾರ ಕಚೇರಿಯಲ್ಲಿ ಪ್ರಾರಂಭಿಸಿರುವ ದಾಖಲೆ ವಿಭಾಗಕ್ಕೆ ಭೇಟಿ ನೀಡಿ ತಮ್ಮ ಡಿಜಟಲೀಕರಣ ಭೂ ದಾಖಲೆಗಳನ್ನು ಪಡೆದುಕೊಳ್ಳ ಬಹುದು ಎಂದರು

ಪುರಸಭೆ ಅಧ್ಯಕ್ಷ ಶಿವಾನಂದ ತಡಸಿ ಸದಸ್ಯರಾದ ಜೀವನ ಪವಾರ ಶಿರಸ್ತೇದಾರ ಗಣೇಶ ಚಳ್ಳಕೇರಿ, ಕೃಷ್ಣಾಜಿ ಆರೇರ, ಆರ್ ಐ ಕುಮಾರ ಪಾಟೀಲ, ರವಿರಾಜ ಚಿಪ್ಪಾಡಿ, ಮುಖಂಡರಾದ ರಾಜು ಮನಗೂಳಿ, ಕರಿಯಪ್ಪ ಕೋಟೂರ, ಅಶೋಕ ಹಸರಗಣ್ಣವರ, ಅಜ್ಜಪ್ಪ ಹಸರಗಣ್ಣವರ, ಯಲ್ಲಪ್ಪ ಬ್ಯಾಲಾಳ, ಆನಂದ ಸುಳ್ಳದ, ನಾಗಪ್ಪ ಕೋಟೂರ, ಶಿವಾನಂದ ಚಿಕ್ಕನರಗುಂದ ಉಪಸ್ಥಿತರಿದ್ದರು.

## ಹಳೆಯ ದಿನಪತ್ರಿಕೆ, ನಿಯತಕಾಲಿಕೆಗಳ ವಿಲೇವಾರಿಗೆ ದರಪಟ್ಟಿ ಆಹ್ವಾನ

**ರಾಯಚೂರು,ಜೂ.18–** ರಾಯಚೂರ ನಗರ ಕೇಂದ್ರ ಗ್ರಂಥಾಲಯ ಮುಖ್ಯ ಕಚೇರಿ ಹಾಗೂ ಅಧೀನದಲ್ಲಿ ಬರುವ ಎಲ್ಲಾ ಶಾಖಾ ಗ್ರಂಥಾಲಯಗಳಲ್ಲಿ ಸಂಗ್ರಹವಾಗಿರುವ ಹಳೆಯ ದಿನಪತ್ರಿಕೆ ಹಾಗೂ ನಿಯತಕಾಲಿಕೆಗಳನ್ನು ವಿಲೇವಾರಿ ಮಾಡಲು ದರಪಟ್ಟಿ ಆಹ್ವಾನಿಸಲಾಗಿದೆ.

2024-25ನೇ ಸಾಲಿನ ದಿನಾಂಕ: 01.04.2024 ರಿಂದ 31.03.2025 ರವರೆಗೆ ನಗರ ಕೇಂದ್ರ ಗ್ರಂಥಾಲಯ, ರಾಯಚೂರು ಮುಖ್ಯ ಕಚೇರಿ ಹಾಗೂ ವಿವಿಧ ಶಾಖಾ ಗ್ರಂಥಾಲಯಗಳಲ್ಲಿ ಸಂಗ್ರಹವಾದ ಹಳೆಯ ದಿನಪತ್ರಿಕೆ ಹಾಗೂ ನಿಯತಕಾಲಿಕೆಗಳನ್ನು ವಿಲೇವಾರಿ ಮಾಡಬೇಕಾಗಿದ್ದು, ಹಳೆಯ ದಿನಪತ್ರಿಕೆ ಹಾಗೂ ನಿಯತಕಾಲಿಕೆಗಳನ್ನು ಖರೀದಿಸಲು ಇಚ್ಛೆಯುಳ್ಳವರು ತಮ್ಮ ದರಗಳನ್ನು ಕೆಳಗಿನ ನಿಬಂದನೆಗಳಿಗೆ ಒಳಪಟ್ಟು ಶಿಲ್ಡು ಮಾಡಿದ ಕವರುಗಳಲ್ಲಿ ಮುಖ್ಯ ಗ್ರಂಥಾಲಯಾಧಿಕಾರಿಗಳು, ನಗರ ಕೇಂದ್ರ ಗ್ರಂಥಾಲಯ, ರಂಗಮಂದಿರ ಹಿಂಭಾಗ, ರಾಯಚೂರು ಇವರ ಹೆಸರಿಗೆ ಜೂನ್ 27ರ ಸಂಜೆ 4 ಗಂಟೆಯೊಳಗೆ ತಲುಪುವಂತೆ ಖುದ್ದಾಗಿ ಇಲ್ಲವೇ ಅಂಚೆಯ ಮೂಲಕ ಸಲ್ಲಿಸಬಹುದು. ಅದೇ ದಿನ ಅಂದರೆ ಜೂನ್ 27ರಂದು ಸಂಜೆ 5 ಗಂಟೆಗೆ ಹಾಜರಿದ್ದವರ ಸಮಕ್ಷಮ ದರಪಟ್ಟಿಗಳನ್ನು ತೆರೆಯಲಾಗುವುದು.

ನಿಯತಕಾಲಿಕೆಗಳಿಗೆ ಅಂದರೆ ವಾರಪತ್ರಿಕೆ, ಅರ್ಧಮಾಸಿಕ, ಮಾಸಿಕ, ತ್ರೈಮಾಸಿಕ, ಅರ್ಧವಾರ್ಷಿಕ ಇತ್ಯಾದಿ ಸೇರಿ ಪ್ರತಿ ಕೆಜಿಗೆ ರೂಪಾಯಿಯಂತೆ ನಮೂದಿಸಬೇಕು. ದರಪಟ್ಟಿಯಲ್ಲಿ ಯಶಸ್ವಿಯಾದ ಸಂಸ್ಥೆಯವರು ಆದೇಶ ನೀಡಿದ 05 ಕೆಲಸದ ದಿನಗಳೊಳಗೆ ಹಳೆಯ ದಿನಪತ್ರಿಕೆ ಹಾಗೂ ನಿಯತಕಾಲಿಕೆಗಳನ್ನು ಮುಖ್ಯ ಗ್ರಂಥಾಲಯಾಧಿಕಾರಿಗಳ ಸಮಕ್ಷಮ ತೂಕ ಮಾಡಿ ಸ್ಥಳದಲ್ಲಿಯೇ ಹಣ ಪಾವತಿಸಿ, ತೆಗೆದುಕೊಂಡು ಹೋಗಬೇಕು. ತಪ್ಪಿದಲ್ಲಿ ಅವರ ಇ.ಎಂ.ಡಿ ಹಣವನ್ನು ಮುಟ್ಟುಗೋಲು ಮಾಡಿಕೊಳ್ಳಲಾಗುವುದು. ತೂಕ ಮತ್ತು ಅಳತೆ ಮಾಪನ ಇಲಾಖೆಯಿಂದ ಪ್ರಮಾಣೀಕರಿಸಿದ ಮಾಪನದಿಂದ ತೂಕ ಮಾಡಿ ಹಣವನ್ನು ಕೂಡಲೇ ಸ್ಥಳದಲ್ಲಿಯೇ ನಗದು ರೂಪದಲ್ಲಿ ಪಾವತಿಸಿ ನಂತರ ದಿನಪತ್ರಿಕೆ ಹಾಗೂ ನಿಯತಕಾಲಿಕೆಗಳನ್ನು ತೆಗೆದುಕೊಂಡು ಹೋಗಬೇಕು. ದಿನಪತ್ರಿಕೆ, ನಿಯತಕಾಲಿಕೆಗಳು ಯಾವ ಸ್ಥಳದಲ್ಲಿ, ಯಾವ ರೀತಿಯಲ್ಲಿ ಇರುತ್ತದೆಯೋ ಅದೇ ರೀತಿಯಲ್ಲಿ ತಮ್ಮ ಸ್ವಂತ ಖರ್ಚಿನಲ್ಲಿ ತೆಗೆದುಕೊಂಡು ಹೋಗತಕ್ಕದ್ದು. ತೂಕ ಪಡೆಯಲು ಚಾಲ್ತಿಯಲ್ಲಿರುವ ಇಲೆಕ್ಟ್ರಾನಿಕ್ ಯಂತ್ರವನ್ನು ಬಳಸತಕ್ಕದ್ದು ಸಾಮಗ್ರಿಗಳನ್ನು ಸಂಗ್ರಹಿಸತಕ್ಕದ್ದು., ಯಾವುದೇ ಕಾರಣ ನೀಡದೇ ದರಪಟ್ಟಿಗಳನ್ನು ಸ್ವೀಕರಿಸುವ ತಿರಸ್ಕರಿಸುವ ಹಕ್ಕು ಕೆಳಗೆ ರುಜು ಮಾಡಿದ ಅಧಿಕಾರಿಗಳಿಗೆ ಇರುತ್ತದೆ. ಇನ್ನಿತರ ಬೇರೆ ಬೇರೆ ನಿಬಂಧನೆಗಳಿಗೊಳಪಟ್ಟು ದರಪಟ್ಟಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಕಚೇರಿ ಸಮಯದಲ್ಲಿ ಕೇಳಿ ಪಡೆಯುವುದು ಎಂದು ಮುಖ್ಯ ಗ್ರಂಥಲಯಾಧಿಕಾರಿ ನಿರ್ಮಲಾ ಹೆಚ್ ಹೊಸೂರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9743497111, 9743496111

ಯುವ ಮಾರ್ಗ

ಗುರುವಾರ : 19-06-2025

# ಐಪಿಎಸ್ ಅಧಿಕಾರಿ ರವೀಂದ್ರ ಕಾಶಪ್ಪ ವಿರುದ್ಧ ಅಕ್ರಮವಾಗಿ ಆಸ್ತಿ ಸಂಪಾದನೆ ಆರೋಪ



**ಬೆಳಗಾವಿ, ಜೂ.18–** ಐಪಿಎಸ್ ಅಧಿಕಾರಿ ರವೀಂದ್ರ ಕಾಶಪ್ಪ ಗದಾಡಿ ಅವರು ಅಧಿಕಾರ ದುರುಪಯೋಗ ಪಡಿಸಿಕೊಂಡು ಅಕ್ರಮವಾಗಿ ಆಸ್ತಿ ಸಂಪಾದಿಸಿದ್ದಾರೆ. ಇವರ ವಿರುದ್ಧ ದೂರು ದಾಖಲಿಸಲು ಅನುಮತಿ ನೀಡಬೇಕು ಎಂದು ಸರ್ಕಾರದ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಕಾರ್ಯದರ್ಶಿಗೆ ಪತ್ರ ಬರೆಯಲಾಗಿದೆ.

ಅಥಣಿ ತಾಲ್ಲೂಕಿನ ವಿನೋದ ಚಕ್ರವರ್ತಿ ಎಂಬುವವರು ಸರ್ಕಾರದ ಕಾರ್ಯದರ್ಶಿಗೆ ಸುದೀರ್ಘವಾಗಿ ಆಸ್ತಿ ಸಂಪಾದನೆಯ ದಾಖಲೆಗಳ ಸಮೇತ ದೂರು ನೀಡಿದ್ದಾರೆ.ಕಳೆದ 2017ರ ಬ್ಯಾಚ್‌ನ ಐಪಿಎಸ್ ಅಧಿಕಾರಿಯಾಗಿರುವ ರವೀಂದ್ರ ಕಾಶಪ್ಪ ಅವರು ಪ್ರಸ್ತುತ ಬೆಳಗಾವಿ ವಲಯದ ಡಿಸಿಆರ್‌ಇ ಎಸ್ ಪಿಯಾಗಿ ಕಾರ್ಯನಿರ್ವಹಿಸುತ್ತಿದ್ದು, ಇವರು ತಮ್ಮ ಪತ್ನಿ, ಸಂಬಂಧಿಕರು ಹಾಗೂ ಬೇನಾಮಿ ಹೆಸರಿನಲ್ಲಿ ಕೃಷಿ ಜಮೀನು ಸೇರಿದಂತೆ ಹಲವು ವ್ಯವಹಾರಗಳಲ್ಲಿ ತೊಡಗಿದ್ದಾರೆ ಎಂದು ದೂರಲಾಗಿದೆ.

ಇವರ ಕುಟುಂಬ ಸದಸ್ಯರು ಸಹಕಾರ ಸಂಘವನ್ನು ಕೂಡ ಆರಂಭಿಸಿ ನಿಯಮ ಬಾಹಿರವಾಗಿ ಸಾಲ ನೀಡಿಕೆ ಹಾಗೂ ಹೂಡಿಕೆ ಮಾಡಿಕೊಳ್ಳುತ್ತಿದ್ದಾರೆ. ಇದರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಮತ್ತು ಲೋಕಾಯುಕ್ತ ನ್ಯಾಯಾಲಯದಲ್ಲಿ ಖಾಸಗಿ ದೂರು ದಾಖಲಿಸುವ ಸಂಬಂಧ ಪ್ರಾಸಿಕ್ಯೂಷನ್‌ಗೆ ಅನುಮತಿ ಮಂಜೂರು ಮಾಡುವಂತೆ ವಿನೋದ್ ಚಕ್ರವರ್ತಿ ಮನವಿ ಮಾಡಿದ್ದಾರೆ.

# ಮೆಟ್ರೊ ರೈಲು ನಿಲ್ದಾಣಗಳಲ್ಲಿ ನಂದಿನಿ ಬದಲಿಗೆ ಅಮೂಲ್‌ಗೆ ಅವಕಾಶ : ರೇಣುಕಾಚಾರ್ಯ ಆಕ್ರೋಶ

**ಬೆಂಗಳೂರು, ಜೂ.18–** ಬೆಂಗಳೂರು ಮೆಟ್ರೊ ರೈಲು ನಿಲ್ದಾಣಗಳಲ್ಲಿ ಗುಜರಾತ್ ಸರ್ಕಾರದ ಅಮೂಲ್ ಮಳಿಗೆಗಳನ್ನು ತೆರೆಯುವ ಬದಲು ಕರ್ನಾಟಕದ ಹೆಮ್ಮೆಯ ನಂದಿನಿ ಬ್ರಾಂಡ್ ಮಳಿಗೆಗೆ ಅವಕಾಶ ನೀಡಬೇಕೆಂದು ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ರಾಜ್ಯ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಮಲ್ಲೇಶ್ವರಂನಲ್ಲಿರುವ ಬಿಜೆಪಿ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೆಟ್ರೊ ರೈಲ್ವೆ ಸ್ಟೇಷನ್‌ಗಳಲ್ಲಿ ಗುಜರಾತ್‌ನ ಅಮೂಲ್ ಮಳಿಗೆಗಳನ್ನು ತೆರೆಯಲು ಅವಕಾಶ ಕೊಟ್ಟಿರುವ ರಾಜ್ಯ ಸರ್ಕಾರದ ನಿರ್ಧಾರ ಕನ್ನಡಿಗರ ಭಾವನೆಗಳಿಗೆ ಹಾಗೂ ರಾಜ್ಯಕ್ಕೆ ಮಾಡಿ ಅವಮಾನ ಎಂದು ವಾಗ್ದಾಳಿ ನಡೆಸಿದರು. ಇಡೀ ದೇಶದಲ್ಲೇ ನಂದಿನಿ ಬ್ರಾಂಡ್ ಹೆಸರುವಾಸಿಯಾಗಿದೆ ದೇಶದಲ್ಲಿ ಇಂದು ಹೈನುಗಾರಿಕೆಯಲ್ಲಿ ಕರ್ನಾಟಕ 2ನೇ ಸ್ಥಾನದಲ್ಲಿದೆ ಎಂದರೆ ನಂದಿನಿ ಪಾತ್ರ ಅತ್ಯಂತ ಪ್ರಮುಖವಾಗಿದೆ. ಇದನ್ನು ಕಡೆಗಣಿಸಿ ಅಮೂಲ್‌ಗೆ ಮಣೆ ಹಾಕಿರುವುದು ಎಷ್ಟರಮಟ್ಟಿಗೆ ಸರಿ ಎಂದು ಪ್ರಶ್ನಿಸಿದರು.

ನಂದಿನಿಯೊಂದಿಗೆ ಕನ್ನಡಿಗರ ಅವಿನಾಭಾವ ಸಂಬಂಧವಿದೆ. ಯಾರದೋ ಹಿತಾಸಕ್ತಿಗಾಗಿ ಇದನ್ನು ಕಡೆಗಣಿಸಿ ಅಮೂಲ್‌ಗೆ ಅವಕಾಶ ಕೊಡುವುದು ಸರಿಯಲ್ಲ. ತಕ್ಷಣವೇ ಸರ್ಕಾರ ತನ್ನ ನಿರ್ಧಾರದಿಂದ ಹಿಂದೆ ಸರಿಯಬೇಕು. ಇಲ್ಲದಿದ್ದರೆ ಕನ್ನಡಿಗರ ಆಕ್ರೋಶಕ್ಕೆ ಕಾಂಗ್ರೆಸ್ ಸರ್ಕಾರ ತುತ್ತಾಗುತ್ತದೆ ಎಂದು ಎಚ್ಚರಿಕೆ ಕೊಟ್ಟರು.

ನಂದಿನಿ ಮಳಿಗೆಗಳಿಗೆ ಮೊದಲು ಬಿಎಂಆರ್‌ಸಿಯಡಿ ಅವಕಾಶ ಕೊಡಿ. ಹಿಂದೆ ನಮ್ಮ ಸರ್ಕಾರ ಅಮೂಲ್ ಹಾಲನ್ನು ಮಾರಾಟ ಮಾಡಲು ಅವಕಾಶ ಕೊಡಲಿದೆ ಎಂದು ರಾಜ್ಯದ ಜನತೆಯ ಮುಂದೆ ಸುಳ್ಳು ಹೇಳಿ ಕಾಂಗ್ರೆಸ್‌ನವರು ಅಧಿಕಾರಕ್ಕೆ ಬಂದರು. ಈಗ ಅದೇ ಅಮೂಲ್‌ಗೆ ರತ್ನಗಂಬಳಿ ಹಾಕಿ ಕನ್ನಡಿಗರ ಬೆನ್ನಿಗೆ ಚೂರಿ ಹಾಕಲು ಹೊರಟಿದ್ದಾರೆ ಎಂದು ದೂರಿದರು.

ಅಮೂಲ್‌ಗೆ ಅವಕಾಶ ಮಾಡಿಕೊಟ್ಟು ನಮ್ಮ ರೈತರ ಹೊಟ್ಟೆ ಮೇಲೆ ಹೊಡೆಯಬಾರದು. ಟೆಂಡರ್ ಕರೆದಿದ್ದರೆ ತಕ್ಷಣವೇ ರದ್ದುಪಡಿಸಿ ನಂದಿನಿ ಮಳಿಗೆ ಹಾಕಲು ಅವಕಾಶ ಮಾಡಿಕೊಡಿ. ಅಮೂಲ್ ಜೊತೆ ಒಳ ಒಪ್ಪಂದ ಮಾಡಿಕೊಂಡಿರುವ ಸಾಧ್ಯತೆಯನ್ನು ತಳ್ಳಿ ಹಾಕುವಂತಿಲ್ಲ ಎಂದು ಅವರು ಶಂಕೆ ವ್ಯಕ್ತಪಡಿಸಿದರು.

**ಸರ್ಕಾರ ಬಿಕರಿ :** ವೃದ್ಧಾಪ್ಯವೇತನ ಸಂಧ್ಯಾ ಸುರಕ್ಷಾ ವೇತನ ಕಡಿತ ಮಾಡಲು ಮುಂದಾಗಿರುವ ಸರ್ಕಾರದ ಕ್ರಮವನ್ನು ಖಂಡಿಸಿದ ರೇಣುಕಾಚಾರ್ಯ ಅವರು ಸರ್ಕಾರ ಆರ್ಥಿಕವಾಗಿ ದಿವಾಳಿಯಾಗಿದೆ ಎಂದು ವಾಗ್ದಾಳಿ ನಡೆಸಿದರು. ಗ್ಯಾರಂಟಿಗಳಿಗೆ ಹಣ ಹೊಂದಿಸಲು ಪರದಾಡುತ್ತಿರುವ ಸರ್ಕಾರ ಪಿಂಚಣಿ ಯೋಜನೆಗಳಾದ ವೃದ್ಧಾಪ್ಯ ವೇತನ.



ಸಂಧ್ಯಾಸುರಕ್ಷ ವೇತನ ಕಡಿತ ಮಾಡಲು ಮುಂದಾಗಿರುವುದು ಸರ್ಕಾರದಲ್ಲಿ ಹಣ ಇಲ್ಲ ಎಂಬ ಮುನ್ಸೂಚನೆಯಾಗಿದೆ. ಗ್ಯಾರಂಟಿಗಳನ್ನು ಜಾರಿ ಮಾಡಿದ್ದೇವೆ ಎಂದು ಹೇಳಿಕೊಳ್ಳುವ ಸರ್ಕಾರಕ್ಕೆ ಪಿಂಚಣಿ ಹಣ ಕೊಡುವ ಯೋಗ್ಯತೆ ಇಲ್ಲವೇ ಎಂದು ಪ್ರಶ್ನಿಸಿದರು. ನಮ್ಮ ಸರ್ಕಾರ ಅಧಿಕಾರದಲ್ಲಿದ್ದಾಗ ವೃದ್ಧಾಪ್ಯ ಪಿಂಚಣಿಯನ್ನು ಹೆಚ್ಚಳ ಮಾಡಿದ್ದೇವೆ.

ಅನರ್ಹರ ಹೆಸರಿನಲ್ಲಿ ಪಿಂಚಣಿ ಕಡಿತ ಮಾಡುತ್ತಿರುವುದು ಸರಿಯಲ್ಲ. ಇದು ದರೋಡೆ ಸರ್ಕಾರ, ಲೂಟಿ ಸರ್ಕಾರ, ಹತ್ಯೆಕೋರ ಸರ್ಕಾರ ಎಂದು ಕಿಡಿಕಾರಿದರು. ಗ್ರಾಮೀಣಾಭಿವೃದ್ಧಿ ಇಲಾಖೆ ಪ್ರಗತಿಪಥ ಯೋಜನೆಯಲ್ಲಿ ಅನುದಾನ ತಾರತಮ್ಯ ಆರೋಪ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು, ಸರ್ಕಾರ ಅನುದಾನ ತಾರತಮ್ಯ ಮಾಡಬಾರದು. ನಮ್ಮ ಸರ್ಕಾರ ಇದ್ದಾಗ ನಾವು ಮಲತಾಯಿ ಧೋರಣೆ ಮಾಡುತ್ತಿರಲಿಲ್ಲ. ಹೀಗಾದದರೆ ಈ ಸರ್ಕಾರ ಬಹಳ ದಿನ ಇರುವುದಿಲ್ಲ ಎಂದು ಎಚ್ಚರಿಸಿದರು.

ಸಿಎಂ–ಡಿಸಿಎಂ ನಡುವೆ ಸಂಘರ್ಷ ನಡೆಯುತ್ತಿದೆ. ಅನುದಾನ ಕಡಿಮೆ ಕೊಟ್ಟರೆ ಆ ಕ್ಷೇತ್ರದ ಜನತೆಗೆ ಅವಮಾನ ಮಾಡಿದಂತೆ. ಬಿಜೆಪಿ ಯಾವತ್ತೂ ಮಲತಾಯಿ ಧೋರಣೆ ಮಾಡಿಲ್ಲ ಎಂದು ಸಮರ್ಥಿಸಿಕೊಂಡ ಅವರು, ಸರ್ಕಾರ ಎಲ್ಲ ಕ್ಷೇತ್ರಗಳಿಗೂ ಸರ್ಕಾರ ತಾರತಮ್ಯ ಮಾಡದೇ ಸಮಾನ ಅನುದಾನ ಕೊಡಬೇಕು ಎಂದು ಒತ್ತಾಯಿಸಿದರು. ಕಾಲ್ತುಳಿತ ಪ್ರಕರಣದಲ್ಲಿ ಸಿಎಂ, ಡಿಸಿಎಂ ರಾಜೀನಾಮೆ ಕೊಡಬೇಕು. ವಿಜಯೋತ್ಸವ ಆಯೋಜನೆ ಪರಿಣಾಮ 11 ಅಮಾಯಕರ ಸಾವಾಗಿದೆ. ಘಟನೆಯ ನೈತಿಕ ಹೊಣೆ ಹೊತ್ತು ಮಂತ್ರಿಗಳು ರಾಜೀನಾಮೆ ಕೊಡಬೇಕು ಎಂದು ರೇಣುಕಾಚಾರ್ಯ ಒತ್ತಾಯಿಸಿದರು.

# ಜೂ. 22ಕ್ಕೆ ಶುಭಾಂಶು ಅಂತರಿಕ್ಷ ಯಾನ



**ನವದೆಹಲಿ,ಜೂ.18–**ಭಾರತೀಯ ಗಗನಯಾತ್ರಿ ಶುಭಾಂಶು ಶುಕ್ಲಾ ಅವರ ಆಕ್ಸಿಯಂ–4 ಮಿಷನ್ ಮತ್ತೆ ಮುಂದೂಡಲಾಗಿದೆ. ಇದೇ ತಿಂಗಳ ಜೂ. 22 ರಂದು ನಡೆಸಲು ತೀರ್ಮಾನಿಸಲಾಗಿದೆ ಎಂದು ಆಕ್ಸಿಯಂ ಬಾಹ್ಯಾಕಾಶ ತಿಳಿಸಿದೆ.

ಜೂ. 11 ರಂದು ಫ್ಲೋರಿಡಾದಲ್ಲಿರುವ ಕೆನಡಿ ಬಾಹ್ಯಾಕಾಶ ಕೇಂದ್ರದಿಂದ ಸ್ಪೇಸ್ ಎಕ್ಸ್‌ನ ಫಾಲ್ಕಾನ್–9 ರಾಕೆಟ್ ಉಡಾವಣೆಯಾಗಬೇಕಿತ್ತು. ರಾಕೆಟ್‌ನಲ್ಲಿ ಇಂಧನ ಸೋರಿಕೆಯಿಂದಾಗಿ ಕೊನೆಯ ಘಳಿಗೆಯಲ್ಲಿ ಉಡಾವಣೆಯನ್ನು ರದ್ದುಪಡಿಸಲಾಗಿತ್ತು. ಮೇ 29, ಜೂ. 8 ಮತ್ತು 10 ರಂದು ರಾಕೆಟ್ ಉಡಾವಣೆಗೆ ದಿನಾಂಕ ನಿಗದಿಯಾಗಿತ್ತಾದರೂ ಮುಂದೂಡಲಾಗಿತ್ತು.

ಹಲವು ಭಾರಿ ಉಡಾವಣೆ ಮುಂದೂಡಿದ ಬಳಿಕ ಅಂತಿಮವಾಗಿ ಜೂ. 19ಕ್ಕೆ ಉಡಾವಣಾ ದಿನಾಂಕವನ್ನು ನಿಗದಿ ಮಾಡಿತ್ತು. ಆದರೆ, ರಷ್ಯಾದ ವಿಭಾಗದಲ್ಲಿ ಇತ್ತೀಚೆಗೆ ನಡೆದ ದುರಸ್ಥಿಗಳ ನಂತರ ಕಕ್ಷೆಯ ಪ್ರಯೋಗಾಲಯದಲ್ಲಿ ಕಾರ್ಯಾಚರಣೆ ಮೌಲ್ಯಮಾಪನ ಮಾಡಲು ನಾಸಾಗೆ ಅವಕಾಶ ಕಲ್ಪಿಸುವ ನಿಟ್ಟಿನಲ್ಲಿ ಜೂ. 19ಕ್ಕೆ ನಿಗದಿಯಾಗಿದ್ದ ಸಮಯವನ್ನು ರದ್ದು ಮಾಡಿ ಹೊಸ ದಿನಾಂಕ ಪ್ರಕಟಿಸಲಾಗಿದೆ.

ಅಂತಾರಾಷ್ಟ್ರೀಯ ಬಾಹ್ಯಾಕಾಶ ಕೇಂದ್ರಕ್ಕೆ ತಂತ್ರಜ್ಞರನ್ನು ಕಳುಹಿಸುವ ಖಾಸಗಿ ಬಾಹ್ಯಾಕಾಶ ಕೇಂದ್ರವನ್ನು ಆಕ್ಸಿಯಂ–4 ಮಿಷನ್‌ಪಯಣಕ್ಕೆ ನಾಸಾ, ಆಕ್ಸಿಯಂ ಸ್ಪೇಸ್ ಮತ್ತು ಸ್ಪೇಸ್ ಎಕ್ಸ್ ಸಂಸ್ಥೆಗಳು ಜೂ. 22 ದಿನಾಂಕವನ್ನು ಆಯ್ಕೆ ಮಾಡಿಕೊಂಡಿದೆ.

ಆಕ್ಸಿಯಂ–4 ವಾಣಿಜ್ಯ ಕಾರ್ಯಾಚರಣೆಯನ್ನು ಕಮಾಂಡರ್ ಪೆಗ್ಗಿವಿಕ್ಸನ್ ನೇತೃತ್ವ ವಹಿಸಿದ್ದು, ಶುಭಾಂಶು ಶುಕ್ಲಾ ಮಿಷನ್ ಪೈಲಟ್ ಆಗಿ ಮತ್ತು ಹಂಗೇರಿಯನ್ ಗಗನಯಾತ್ರಿ ಟಿಬೋರ್‌ಕಾಹು ಮತ್ತು ಪೋಲೆಂಡ್‌ನ ಸ್ಲಾವೋಸ್ಜ್ ಉಜ್ನಾಮ್‌ಸ್ಕಿ ವಿಸ್ನಿವಿಸ್ನಿ ಮಿಷನ್ ತಜ್ಞರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

# ಇಸ್ರೇಲ್‌ನಲ್ಲಿ ಕನ್ನಡಿಗರು ಸೇಫ್

**ಬೆಂಗಳೂರು, ಜೂ.18–** ಇಸ್ರೇಲ್‌ನಲ್ಲಿ ರಾತ್ರಿ ವೇಳೆ ಬಾಂಬ್ ಸ್ಫೋಟಿಸುತ್ತವೆ. ದಾಳಿಯಾಗುವ ಮುನ್ನ ನಮ್ಮ ಮೊಬೈಲ್‌ಗಳಿಗೆ ಸಂದೇಶ ಬರುತ್ತದೆ ಮತ್ತು ಸೈರನ್ ಕೂಡ ಕೇಳುತ್ತದೆ. ತಕ್ಷಣವೇ ಸುರಕ್ಷಿತ ಪ್ರದೇಶಗಳಿಗೆ ತೆರಳುತ್ತೇವೆ ಎಂದು ಕನ್ನಡಿಗರು ವಿವರಿಸಿದ್ದಾರೆ.

ಇಸ್ರೇಲ್‌ನ ಟೆಲ್ ಅವಿವ್‌ನಿಂದ ಸ್ವಲ್ಪದೂರದಲ್ಲೇ ಇರುವ ರಿಸಿನೊಲಿಜಿಯೊ ಪ್ರದೇಶದ ಆಸ್ಪತ್ರೆಯಲ್ಲಿ ನರ್ಸ್ ಆಗಿ ಕೆಲಸ ಮಾಡುತ್ತಿರುವ ಹಾಸನದ ಅಂತೋಣಿ ಮೇರಿ ಎಂಬುವರು ವಿಡಿಯೋ ಕಾಲ್ ಮೂಲಕ ತಮ್ಮ ತವರೂರಿನ ಜನರಿಗೆ ಅಲ್ಲಿನ ಪರಿಸ್ಥಿತಿಯನ್ನು ವಿವರಿಸಿದ್ದಾರೆ. ಹಾಸನದಿಂದ ಸುಮಾರು 25ಕ್ಕೂ ಹೆಚ್ಚು ಮಂದಿ ಇಸ್ರೇಲ್‌ನ ವಿವಿಧ ಪ್ರದೇಶಗಳಲ್ಲಿ ನೆಲೆಸಿದ್ದಾರೆ. ಮಂಗಳೂರಿನವರು ಹೆಚ್ಚಿನ ಸಂಖ್ಯೆಯಲ್ಲಿ ಕೆಲಸ ಮಾಡುತ್ತಿದ್ದಾರೆ. ಸದ್ಯಕ್ಕೆ ನಾವು ಇಲ್ಲಿ ಸುರಕ್ಷಿತವಾಗಿದ್ದೇವೆ. ಸರ್ಕಾರ ನಮ್ಮನ್ನು ಚೆನ್ನಾಗಿ ನೋಡಿಕೊಳ್ಳುತ್ತಿದೆ. ಅಗತ್ಯವಿರುವ ಎಲ್ಲಾ ಸಹಕಾರ ನೀಡುತ್ತಿದೆ ಎಂದು ಹೇಳಿದ್ದಾರೆ.

ನಿನ್ನೆ, ಮೊನ್ನೆ ಸಮಸ್ಯೆಗಳಿದ್ದು, ಇಂದು ಸರಿ ಹೋಗಿದೆ. ಎಲ್ಲವೂ ಸಹಜ ಸ್ಥಿತಿಯಲ್ಲಿದೆ. ಆಸ್ಪತ್ರೆ, ಮಾಲ್‌ಗಳು, ಔಷಧಿ ಅಂಗಡಿಗಳು ತೆರೆದಿವೆ. ಜನ ಸಹಜವಾಗಿ ಓಡಾಡುತ್ತಿದ್ದಾರೆ ಎಂದರು. ರಾತ್ರಿ ವೇಳೆ ಇಸ್ರೇಲ್ ದಾಳಿಯಾಗುತ್ತದೆ. ಆ ಸಂದರ್ಭಕ್ಕೆ ನಮ್ಮ ಮೊಬೈಲ್‌ಗೆ ಸಂದೇಶ ಬರುತ್ತದೆ. ತಕ್ಷಣವೇ ನಾವು ಸುರಕ್ಷಿತ ಸ್ಥಳಗಳಿಗೆ ಅಥವಾ ಬಂಕರ್ ಗಳಿಗೆ ಸೇರಿಕೊಳ್ಳುತ್ತೇವೆ. ಈವರೆಗೂ ಅಂತಹ ಯಾವುದೇ ಅಪಾಯಗಳಾಗಿಲ್ಲ ಎಂದು ಹೇಳಿಕೊಂಡಿದ್ದಾರೆ. ಬಾಂಬ್‌ಗಳು ಸ್ಫೋಟಿಸುವ ಸದ್ದು ಕೇಳಿಸುತ್ತಿರುತ್ತದೆ. ಬಂಕರ್‌ಗಳಿಗೆ ಸೇರಿದ್ದೇವೆ, ಯಾವುದೇ ಅಪಾಯವಾಗಿಲ್ಲ. ಇಲ್ಲಿನ ಜನ ತುಂಬಾ ಒಳ್ಳೆಯವರು. ಎಲ್ಲಾ ರೀತಿಯ ಸಹಕಾರ ನೀಡುತ್ತಾರೆ ಎಂದು ಹೇಳಿದ್ದಾರೆ.

ಪ್ರತಿಯೊಂದು ಬಂಕರ್‌ಗಳು ಸುಮಾರು 50 ಜನ ಉಳಿಯಬಹುದಾದಂತಹ ವಿಶಾಲವಾದ ಬಂಕರ್‌ಗಳಿರುತ್ತವೆ. ಭೂಮೇಲ್ಮ ಭಾಗದಲ್ಲಿರುವ ಕಟ್ಟಡದಿಂದ



ತಳಭಾಗದಲ್ಲಿರುವ ಬಂಕರ್‌ಗೆ ತಲುಪಲು 2 ನಿಮಿಷ ಸಾಕು. ನಾವು ಕೆಲಸ ಮಾಡುವ ಕಡೆಯಲ್ಲಿ ಮೂರು ಬಂಕರ್‌ಗಳಿವೆ. ಸೈರನ್ ಕೇಳುತ್ತಿದ್ದಂತೆ ರೋಗಿಗಳನ್ನು ಕರೆದುಕೊಂಡು ಬಂಕರ್ ಸೇರಿಕೊಳ್ಳುತ್ತೇವೆ ಎಂದರು.ಬಂಕರ್‌ಗಳನ್ನು ಬಾಂಬ್ ನಿರೋಧಕವಾಗಿ ನಿರ್ಮಿಸಲಾಗಿದೆ. ಬಾಂಬ್ ಅಥವಾ ಸೆಲ್ ಸಿಡಿದರೆ ಬಂಕರ್‌ನಲ್ಲಿರುವವರಿಗೆ ಯಾವುದೇ ಅಪಾಯಗಳಾಗುವುದಿಲ್ಲ.

ಹೊರಭಾಗದಲ್ಲಿದ್ದವರಿಗೆ ತೊಂದರೆಗಳಾಗಬಹುದು. ಕೆಲವು ಕಡೆ ಸಾವು–ನೋವುಗಳಾಗಿವೆ ಎಂದು ವಿವರಿಸಿದ್ದಾರೆ.ಸದ್ಯಕ್ಕೆ ವಿಮಾನಯಾನ ಸೇವೆಯನ್ನು ಸ್ಥಗಿತಗೊಳಿಸಲಾಗಿದೆ. ಅದು ಶುರುವಾದ ಬಳಿಕ ಬಹಳಷ್ಟು ಮಂದಿ ವಾಪಸ್ ಬರುವ ಸಾಧ್ಯತೆಗಳಿವೆ ಎಂದು ಅವರು ಹೇಳಿದ್ದಾರೆ.

# 3 ಸಾವಿರ ರೂ.ಗೆ ವಾರ್ಷಿಕ ಟೋಲ್ ಪಾಸ್

**ನವದೆಹಲಿ, ಜೂ.18–** ಟೋಲ್ ಕಿರಿಕಿರಿಗೆ ಬ್ರೇಕ್ ಹಾಕಲು ಫಾಸ್ಟ್ ಟ್ಯಾಗ್ ಆಧಾರಿತ ಪಾಸ್ ಜಾರಿಗೆ ಕೇಂದ್ರ ಸರ್ಕಾರ ಮುಂದಾಗಿದೆ.

3 ಸಾವಿರ ರೂಪಾಯಿಗೆ ವಾರ್ಷಿಕ ಟೋಲ್ ಪಾಸ್ ನೀಡಲು ಸರ್ಕಾರ ಮುಂದಾಗಿದ್ದು, ಆಗಸ್ಟ್ 15 ರಿಂದ ಜಾರಿಗೆ ಬರಲಿದೆ ಎಂದು ಕೇಂದ್ರ ಹೆದ್ದಾರಿ ಖಾತೆಯ ಸಚಿವ ನಿತಿನ್ ಗಡ್ಕರಿ ಘೋಷಿಸಿದ್ದಾರೆ.

ನಿತಿನ್ ಗಡ್ಕರಿ ಅವರು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಈ ಫಾಸ್ಟ್ ಟ್ಯಾಗ್ ಆಧರಿತ ವಾರ್ಷಿಕ ಪಾಸ್ ಬಗ್ಗೆ ವಿವರವನ್ನು ಹಂಚಿಕೊಂಡಿದ್ದಾರೆ.

ನಾವು 3 ಸಾವಿರ ರೂ.ಗೆ ಫಾಸ್ಟ್‌ಟ್ಯಾಗ್ ಆಧಾರಿತ ವಾರ್ಷಿಕ ಪಾಸ್ ಅನ್ನು ಪರಿಚಯಿಸುತ್ತಿದ್ದು ಆಗಸ್ಟ್ 15, 2025 ರಿಂದ ಜಾರಿಗೆ ಬರುತ್ತದೆ. ಸಕ್ರಿಯಗೊಳಿಸಿದ ದಿನಾಂಕದಿಂದ ಒಂದು ವರ್ಷ ಅಥವಾ 200 ಟ್ರಿಪ್‌ಗಳವರೆಗೆ ಮಾನ್ಯವಾಗಿರುತ್ತದೆ ಎಂದು ತಿಳಿಸಿದ್ದಾರೆ.

ಈ ಪಾಸ್ ಅನ್ನು ಕಾರುಗಳು, ಜೀಪ್‌ಗಳು ಮತ್ತು ವ್ಯಾನ್‌ಗಳಂತಹ ವಾಣಿಜ್ಯೇತರ ಖಾಸಗಿ ವಾಹನಗಳಿಗೆ



ಪ್ರತ್ಯೇಕವಾಗಿ ವಿನ್ಯಾಸಗೊಳಿಸಲಾಗಿದೆ. ನವೀಕರಣಕ್ಕಾಗಿ ಮೀಸಲಾದ ಲಿಂಕ್ ಅನ್ನು ಶೀಘ್ರದಲ್ಲೇ ರಾಜ್‌ಮಾರ್ಗ್ ಯಾತ್ರಾ ಅಪ್ಲಿಕೇಶನ್‌ನಲ್ಲಿ ಹಾಗೂ ರಾಷ್ಟ್ರೀಯ ಅಭಿವೃದ್ಧಿ ಪ್ರಾಧಿಕಾರದ ಅಧಿಕೃತ ವೆಬ್‌ಸೈಟ್‌ಗಳಲ್ಲಿ ಲಭ್ಯವಾಗುವಂತೆ ಮಾಡಲಾಗುತ್ತದೆ.

ಈ ಪಾಸ್‌ನಿಂದ 60 ಕಿ.ಮೀ ವ್ಯಾಪ್ತಿಯೊಳಗೆ ಇರುವ ಟೋಲ್ ಪ್ಲಾಜಾಗಳಿಗೆ ಸಂಬಂಧಿಸಿದ ದೀರ್ಘಕಾಲದ ಸಮಸ್ಯೆಗಳು ಪರಿಹಾರವಾಗಲಿದೆ. ಟೋಲ್‌ಗಳಲ್ಲಿ ಕಾಯುವ ಸಮಯ ಮತ್ತು ದಟ್ಟಣೆ ಕಡಿಮೆ ಯಾಗಲಿದೆ.

ಟೋಲ್ ಪ್ಲಾಜಾಗಳಲ್ಲಿ ವಿವಾದಗಳು ಕಡಿಮೆಯಾಗಲಿದ್ದು ಲಕ್ಷಾಂತರ ಖಾಸಗಿ ವಾಹನ ಮಾಲೀಕರಿಗೆ ಸುಗಮ ಪ್ರಯಾಣದ ಅನುಭವವನ್ನು ವಾರ್ಷಿಕ ಪಾಸ್ ನೀಡಲಿದೆ.

# ಭಾರತ–ಪಾಕ್ ಯುದ್ಧ ನಿಲ್ಲಿಸಿದ್ದು ನಾನೇ ಎಂದು ಬಿಲ್ಡಪ್ ಕೊಟ್ಟಿದ್ದ ಟ್ರಂಪ್‌ಗೆ ಮೋದಿ ಸ್ಪಷ್ಟನೆ

**ನವದೆಹಲಿ,ಜೂ.18–** ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ನರಮೇಧಕ್ಕೆ ಪ್ರತಿಕಾರವಾಗಿ ಆಪರೇಷನ್ ಸಿಂಧೂರದ ಮೂಲಕ ಪಾಕಿಸ್ತಾನಕ್ಕೆ ಸರಿಯಾದ ಪಾಠ ಕಲಿಸಿದ್ದರಿಂದ ನಮ್ಮ ಮುಂದೆ ಮಂಡಿಯೂರುವಂತೆ ಮಾಡಿದ್ದೇವೆ ಹೊರತು ಯಾವುದೇ ಮೂರನೇ ರಾಷ್ಟ್ರದ ಮಧ್ಯಪ್ರವೇಶದಿಂದ ಕದನ ವಿರಾಮ ಘೋಷಣೆ ಮಾಡಲಿಲ್ಲ ಎಂದು ಪ್ರಧಾನಿ ನರೇಂದ್ರಮೋದಿ, ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ಗೆ ವಾಸ್ತವ ಪರಿಚಯ ಮಾಡಿಕೊಟ್ಟಿದ್ದಾರೆ.

ಭಾರತ ಹಾಗೂ ಪಾಕಿಸ್ತಾನ ನಡುವೆ ಕದನ ವಿರಾಮ ಘೋಷಣೆ ಕುರಿತು ಎರಡೂ ದೇಶಗಳ ಪರಸ್ಪರ ಒಪ್ಪಿಗೆ ಬಳಿಕ ಕದನ ವಿರಾಮ ಘೋಷಿಸಲಾಗಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್‌ಗೆ ಪ್ರಧಾನಿ ಮೋದಿ ಸ್ಪಷ್ಟನೆ ನೀಡಿದ್ದಾರೆ.

ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹಾಗೂ ಪ್ರಧಾನಮಂತ್ರಿ ನರೇಂದ್ರ ಮೋದಿಯವರ ನಡುವೆ 35 ನಿಮಿಷಗಳ ದೂರವಾಣಿ ಸಂಭಾಷಣೆಯ ಸಮಯದಲ್ಲಿ ಕಾಶ್ಮೀರ ವಿಚಾರ ಪ್ರಸ್ತಾಪವಾಯಿತು ಎಂದು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ ಅವರು ಮಾಹಿತಿ ನೀಡಿದ್ದಾರೆ. ಮಾತುಕತೆ ವೇಳೆ ಪ್ರಧಾನಿ ಮೋದಿಯವರು ಭಾರತದ ಭಯೋತ್ಪಾದನಾ ವಿರೋಧಿ ಕ್ರಮಗಳ ಬಗ್ಗೆ, ವಿಶೇಷವಾಗಿ ಆಪರೇಷನ್ ಸಿಂಧೂರ್ ಬಗ್ಗೆ ಟ್ರಂಪ್ ಬಳಿ ವಿವರವಾಗಿ ಚರ್ಚಿಸಿದರು ಎಂದು ಹೇಳಿದ್ದಾರೆ.

ಜಿ–7 ಶೃಂಗಸಭೆಗೆ ಭೇಟಿ ನೀಡಿದ್ದ ವೇಳೆ ಅಮೆರಿಕಗೆ ಭೇಟಿ ನೀಡುವಂತೆ ಟ್ರಂಪ್ ಮೋದಿಯನ್ನು ಆಹ್ವಾನಿಸಿದ್ದರು. ಆದರೆ ಮೊದಲೇ ವೇಳಾಪಟ್ಟಿ ನಿಗದಿಯಾಗಿದ್ದ ಹಿನ್ನೆಲೆ ಅಮೆರಿಕಗೆ ಭೇಟಿ ನೀಡಲು ಸಾಧ್ಯವಿಲ್ಲ ಎಂದು ಮೋದಿ ತಿಳಿಸಿದ್ದಾರೆ. ಬಳಿಕ ದೂರವಾಣಿ ಮೂಲಕ ಟ್ರಂಪ್ ಗೆ ಕರೆ ಮಾಡಿದ ಮೋದಿ, ಆಪರೇಷನ್ ಸಿಂಧೂರದ ಬಳಿಕ ಭಾರತ ಹಾಗೂ ಪಾಕ್ ನಡುವೆ ಕದನ ವಿರಾಮ ಘೋಷಣೆ ಕುರಿತು ಭಾರತದ ನಿಲುವನ್ನು ಸ್ಪಷ್ಟಪಡಿಸಿದ್ದಾರೆ. ಪಾಕ್ ಮನವಿ ಬಳಿಕ ಭಾರತ ಪರಸ್ಪರ ಹೊಂದಾಣಿಕೆಯೊಂದಿಗೆ ಕದನ ವಿರಾಮ ಘೋಷಿಸಿದೆ. ಇದರಲ್ಲಿ ಯಾವ ದೇಶದ ಮಧ್ಯಸ್ಥಿಕೆಯೂ ಇರಲಿಲ್ಲ. ಯಾವುದೇ ವ್ಯಾಪಾರ ಒಪ್ಪಂದದ ಬಗ್ಗೆಯೂ ಚರ್ಚಿಸಿಲ್ಲ.

ಭಾರತವು ಇನ್ನು ಮುಂದೆ ಭಯೋತ್ಪಾದನೆಯನ್ನು ಪ್ರಾಕ್ಸಿ ಯುದ್ಧವಾಗಿ ನೋಡುವುದಿಲ್ಲ, ಬದಲಿಗೆ ಯುದ್ಧವಾಗಿ ನೋಡುತ್ತದೆ. ಭಾರತದ ಆಪರೇಷನ್ ಸಿಂಧೂರ ಇನ್ನೂ ಮುಂದುವರಿಯುತ್ತದೆ ಎಂದು ಮೋದಿ ಹೇಳಿದರು.

ಸುಮಾರು 35 ನಿಮಿಷಗಳ ಕಾಲ ಟ್ರಂಪ್ ಜೊತೆ ಪ್ರಧಾನಿ ನರೇಂದ್ರ ಮೋದಿ ದೂರವಾಣಿಯಲ್ಲಿ ಮಾತನಾಡಿದರು. ಇದೇ ವೇಳೆ ಕ್ವಾಡ್ ಸಭೆಗೆ ಭಾಗಿಯಾಗಲು ಭಾರತಕ್ಕೆ ಬರುವಂತೆ ಟ್ರಂಪ್‌ಗೆ ಮೋದಿ ಮನವಿ ಮಾಡಿದ್ದು, ಮೋದಿ ಆಹ್ವಾನವನ್ನು ಟ್ರಂಪ್ ಸ್ವೀಕರಿಸಿದ್ದಾರೆ. ಈ ಮೊದಲು ನನ್ನ ಮಧ್ಯಸ್ಥಿಕೆಯಿಂದಲೇ ಭಾರತ ಹಾಗೂ ಪಾಕಿಸ್ತಾನದ ನಡುವೆ ಕದನ ವಿರಾಮ ಘೋಷಣೆಯಾಗಿದೆ ಎಂದು ಟ್ರಂಪ್ ಹೇಳಿಕೊಂಡಿದ್ದರು. ಇದೀಗ ಟ್ರಂಪ್‌ಗೆ ಮೋದಿ ಸ್ಪಷ್ಟ ಸಂದೇಶ ರವಾನಿಸಿದ್ದಾರೆ.

ಏಪ್ರಿಲ್ 22 ರ ನಂತರ ಭಾರತವು ಭಯೋತ್ಪಾದನೆಯ ವಿರುದ್ಧ ಕ್ರಮ ಕೈಗೊಳ್ಳುವ ತನ್ನ ದೃಢನಿಶ್ಚಯದ ಬಗ್ಗೆ ಇಡೀ ಜಗತ್ತಿಗೆ ತಿಳಿಸಿದೆ.ಜಮ್ಮು ಮತ್ತು ಕಾಶ್ಮೀರ ವಿವಾದಕ್ಕೆ ಸಂಬಂಧಿಸಿದಂತೆ ಭಾರತ ಎಂದಿಗೂ ಮೂರನೇ ಶಕ್ತಿಯ ಮಧ್ಯಸ್ಥಿಕೆ ಕೇಳಿಲ್ಲ, ಮುಂದೆಯೂ ಕೇಳುವುದಿಲ್ಲ ಎಂದು ತಿಳಿಸಿದ್ದಾರೆಂದು ಮಿಶ್ರಿ ಅವರು ತಿಳಿಸಿದ್ದಾರೆ. ಭಾರತ–ಅಮೆರಿಕ ವ್ಯಾಪಾರ ಒಪ್ಪಂದ ಮತ್ತು ಭಾರತ ಮತ್ತು ಪಾಕಿಸ್ತಾನ ನಡುವಿನ ಮಧ್ಯಸ್ಥಿಕೆ ಕುರಿತು. ಅಮೆರಿಕದೊಂದಿಗೆ ಯಾವುದೇ ಮಟ್ಟದಲ್ಲಿ ಮಾತುಕತೆ ನಡೆದಿಲ್ಲ. ಮಿಲಿಟರ ಕ್ರಮವನ್ನು ನಿಲ್ಲಿಸುವ ಕುರಿತು, ಭಾರತ ಮತ್ತು ಪಾಕಿಸ್ತಾನದ ನಡುವೆ ನೇರವಾಗಿ ಮಾತುಕತೆಗಳು ನಡೆದಿವೆ ಎಂದು ಮಾಹಿತಿ ನೀಡಿದ್ದಾರೆ.

ಜಮ್ಮು ಮತ್ತು ಕಾಶ್ಮೀರ ವಿವಾದಕ್ಕೆ ಸಂಬಂಧಿಸಿದಂತೆ, ಭಾರತ ಮೊದಲಿನಿಂದಲೂ ದ್ವಿಪಕ್ಷೀಯ ಮಾತುಕತೆಗೆ ಒತ್ತು ನೀಡಿದೆ. ಇದರಲ್ಲಿ ಮೂರನೇ ಶಕ್ತಿಯ ಮಧ್ಯಸ್ಥಿಕೆಯನ್ನು ಭಾರತ ಎಂದಿಗೂ ಒಪ್ಪಿಕೊಂಡಿಲ್ಲ. ಮುಂದೆ ಒಪ್ಪುವುದೂ ಇಲ್ಲ. ಈ ಪ್ರಾದೇಶಿಕ ವಿವಾದ ಬಗೆಹರಿಯಲು ಮೂರನೇ ಶಕ್ತಿಯ ಅವಶ್ಯಕತೆಯೇ ಇಲ್ಲ ಎಂಬುದು ಭಾರತದ ದೃಢವಾದ ನಿಲುವು ಎಂದು ಪ್ರಧಾನಿ ಮೋದಿ ಅವರು ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರಿಗೆ ಸ್ವತ ಸ್ಪಷ್ಟವಾಗಿ ಹೇಳಿದ್ದಾರೆ.

ಯುವ ಮಾರ್ಗ

ಗುರುವಾರ : 19–06–2025

## ಬಿಡಾಡಿ ದನಗಳು, ಹಂದಿಗಳು, ನಾಯಿಗಳಿಂದ ಸಾರ್ವಜನಿಕರಿಗೆ ತೊಂದರೆ: ಮಾಲೀಕರಿಗೆ ಎಚ್ಚರಿಕೆ

**ರಾಯಚೂರು,ಜೂ.18–**ರಾಯಚೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಮುಖ್ಯ ರಸ್ತೆಗಳಲ್ಲಿ ದನಗಳು, ಹಂದಿಗಳು ಹಾಗೂ ನಾಯಿಗಳ ಹಾವಳಿ ಜಾಸ್ತಿಯಾಗಿದ್ದು, ಇದರಿಂದಾಗಿ ಸಾರ್ವಜನಿಕರಿಗೆ, ವಾಹನ ಸಂಚಾರಕ್ಕೆ ತೊಂದೆಯಾಗುತ್ತಿದೆ. ಕೆಲವೊಮ್ಮೆ ಇವುಗಳಿಂದಾಗಿ ರಸ್ತೆ ಅಪಘಾತಗಳು ಸಂಭವಿಸುತ್ತವೆ. ಆದ್ದರಿಂದ ದನಗಳು, ಹಂದಿಗಳು, ನಾಯಿಗಳಿಗೆ ಸಂಬಂಧಿಸಿದ ಮಾಲೀಕರು ಸಾಕಾಣಿಕೆದಾರರು ತಮ್ಮ ಸಾಕು ಪ್ರಾಣಿಗಳನ್ನು ಜಾನುವಾರುಗಳನ್ನು ಸಾರ್ವಜನಿಕ ಸ್ಥಳಗಳಲ್ಲಿ ಬಿಡದೇ ತಮ್ಮ ವಶಕ್ಕೆ ತೆಗೆದುಕೊಂಡು ಅವುಗಳನ್ನು ಪಾಲನೆ ಮಾಡಬೇಕು.

3 ದಿನಗಳ ಗಡುವು: ದನಗಳು, ಹಂದಿಗಳು ಹಾಗೂ ನಾಯಿಗಳಿಗೆ ಸಂಬಂಧಿಸಿದ ಮಾಲೀಕರು ಹಾಗೂ ಸಾಕಣೆದಾರರು ಈ ಪತ್ರಿಕಾ ಪ್ರಕಟಣೆಯ ದಿನಾಂಕದಿಂದ ಮೂರು ದಿನಗಳೊಳಗಾಗಿ ದನಗಳು, ಹಂದಿಗಳು ಹಾಗೂ ನಾಯಿಗಳನ್ನು ತಮ್ಮ ಸುಪರ್ದಿಗೆ ಪಡೆಯಬೇಕು.

ಹಾಗೊಂದು ವೇಳೆ ದನಗಳು, ಹಂದಿಗಳು ಹಾಗೂ ನಾಯಿಗಳಿಂದ ಸಂಭವಿಸಿದ ಅಥವಾ ಸಂಭವಿಸಬಹುದಾದ ಅನಾಹುತ/ ಅಪಘಾತಗಳಿಗೆ ಆಯಾ ಮಾಲೀಕರು ಹಾಗೂ ಸಾಕಣೆದಾರರನ್ನೇ ಹೊಣೆಯಾಗಿಸಲಾಗುವುದು. ಆದ್ದರಿಂದ ದನಗಳು, ಹಂದಿಗಳು ಹಾಗೂ ನಾಯಿಗಳನ್ನು ನಗರದಿಂದ ಹೊರವಲಯದ ಸ್ವಂತ ಒಡೆತನದ ಜಮೀನಿನಲ್ಲಿ ಸಾಕಣೆ ಮಾಡಬೇಕು. ಇದಕ್ಕೆ ತಪ್ಪಿದಲ್ಲಿ ರಾಯಚೂರ ಮಹಾನಗರ ಪಾಲಿಕೆಯಿಂದ ನಗರದಿಂದ ಹೊರಕ್ಕೆ ಸಾಗಣೆ ಮಾಡಿ ಸಾಗಣೆಯ ವೆಚ್ಚವನ್ನು ಮಾಲೀಕರು ಸಾಕಣೆದಾರರಿಂದ ಪಡೆಯಲಾಗುವುದು. ಸಾಗಣೆ ವೇಳೆ ಯಾವುದೇ ಅಪಘಾತ ಸಂಭವಿಸಿದಲ್ಲಿ ವಿಪತ್ತು ನಿರ್ವಹಣಾ ಕಾಯ್ದೆ 2005ರಡಿ ಮತ್ತು ಮಹಾನಗರ ಪಾಲಿಕೆಯ ಕಾಯ್ದೆಗಳ ಪ್ರಕಾರ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಮಹಾನಗರ ಪಾಲಿಕೆ ಉಪ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**3 ದಿನಗಳು ಮೀರಿದರೆ ದಂಡ:** ಹೋರಿ, ಆಕಳು ಮತ್ತು ಎಮ್ಮೆಗಳಿಗೆ 3 ದಿನಕ್ಕೆ ವಿಧಿಸುವ ದಂಡ 600 ರೂ. ನಂತರ ವಿಧಿಸುವ ದಂಡ ಪ್ರತಿ ದಿನಕ್ಕೆ 300 ರೂ.ಗಳು. ಕ್ಯಾಟಲ್ (ಜಾನುವಾರು) 3 ದಿನಕ್ಕೆ ವಿಧಿಸುವ ದಂಡ 300 ರೂ. ನಂತರ ವಿಧಿಸುವ ದಂಡ ಪ್ರತಿ ದಿನಕ್ಕೆ 50 ರೂ.ಗಳು., ಕುದುರೆಗಳಿಗೆ 3 ದಿನಕ್ಕೆ ವಿಧಿಸುವ ದಂಡ 300 ರೂ. ನಂತರ ವಿಧಿಸುವ ದಂಡ ಪ್ರತಿ ದಿನಕ್ಕೆ 50 ರೂ.ಗಳು., ಹಂದಿ ಮತ್ತು ಕತ್ತೆಗೆ 3 ದಿನಕ್ಕೆ ವಿಧಿಸುವ ದಂಡ 300 ರೂ. ನಂತರ ವಿಧಿಸುವ ದಂಡ ಪ್ರತಿ ದಿನಕ್ಕೆ 25 ರೂ.ಗಳು. ಮೇಕೆ ಮತ್ತು ಕುರಿಗೆ 3 ದಿನಕ್ಕೆ ವಿಧಿಸುವ ದಂಡ 25 ರೂ. ನಂತರ ವಿಧಿಸುವ ದಂಡ ಪ್ರತಿ ದಿನಕ್ಕೆ 25 ರೂ.ಗಳನ್ನು ವಿಧಿಸಲಾಗುತ್ತಿದೆ ಎಂದು ಉಪ ಆಯುಕ್ತರು ತಿಳಿಸಿದ್ದಾರೆ.

## ರಾಜೀವ್‌ಗಾಂಧಿ ಆರೋಗ್ಯ ವಿಶ್ವವಿದ್ಯಾಲಯದ ಕೋರ್ಸ್‌ಗಳ ಪ್ರವೇಶಕ್ಕೆ ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

**ರಾಯಚೂರು,ಜೂ.18–** ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ 2024–25ನೇ ಸಾಲಿಗೆ ಮೆಟ್ರಿಕ್ ನಂತರದ ಕೋರ್ಸ್‌ಗಳಲ್ಲಿ ಓದುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ "ಶುಲ್ಕ ಮರುಪಾವತಿ" ಯೋಜನೆಯ ಸೌಲಭ್ಯವನ್ನು ಆನ್‌ಲೈನ್ ಮೂಲಕ ನೀಡಲಾಗುತ್ತಿದೆ. ಈ ಯೋಜನೆಯ ಅರ್ಜಿ ಸಲ್ಲಿಸಲು ಮೊದಲು ನಿಗದಿಯಾದ ಕೊನೆಯ ದಿನಾಂಕ ಜೂನ್ 15 ಆಗಿದ್ದು, ವಿದ್ಯಾರ್ಥಿಗಳು ಹಾಗೂ ಶೈಕ್ಷಣಿಕ ಸಂಸ್ಥೆಗಳ ಮನವಿ ಪರಿಗಣಿಸಿ ಹಾಗೂ ಮಾನ್ಯ ಹೈಕೋರ್ಟ್ ನೀಡಿರುವ ಮಧ್ಯಂತರ ಆದೇಶದನ್ವಯ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಕೋರ್ಸ್‌ಗಳಿಗೆ ಮಾತ್ರ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು ಜೂನ್ 30 ರವರೆಗೆ ವಿಸ್ತರಿಸಲಾಗಿದೆ.

ವಿದ್ಯಾರ್ಥಿಗಳು ತಮ್ಮ ಅರ್ಜಿಯನ್ನು ಅಧಿಕೃತ ವೆಬ್‌ಸೈಟ್ https://ssp.postmatric.karnataka.gov.in ಮುಖಾಂತರ ಆನ್‌ಲೈನ್ ಮೂಲಕ ಸಲ್ಲಿಸಬೇಕಾಗಿದೆ. ಈ ಯೋಜನೆಯ ವಿವರಗಳು, ಅರ್ಹತೆ ಮಾನದಂಡ, ಅಗತ್ಯ ದಾಖಲೆಗಳು ಹಾಗೂ ಸಂಬಂಧಿತ ಸರ್ಕಾರಿ ಆದೇಶಗಳಿಗಾಗಿ ಇಲಾಖೆಯ ಅಧಿಕೃತ ವೆಬ್‌ಸೈಟ್ https://bcwd.karnataka.gov.in ಗೆ ಭೇಟಿ ನೀಡಬಹುದು.

ಈ ಯೋಜನೆಗೆ ಸಂಬಂಧಿಸಿದ ಯಾವುದೇ ಸಹಾಯಕ್ಕಾಗಿ ವಿದ್ಯಾರ್ಥಿಗಳು 8050770005 ಈ ದೂರವಾಣಿ ಸಂಖ್ಯೆಯಲ್ಲಿ ಸಂಪರ್ಕಿಸಬಹುದು ಅಥವಾ bcwdhelpline@gmail.com ಗೆ ಇಮೇಲ್ ಕಳುಹಿಸಬಹುದು. ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶ ಸಹಾಯವಾಣಿಯ ಇಮೇಲ್ postmatrichelp@karnataka.gov.in ಆಗಿದ್ದು, ಸಹಾಯವಾಣಿ ದೂರವಾಣಿ ಸಂಖ್ಯೆ 1902 ರಲ್ಲಿ ಸಹ ಸೇವೆ ಲಭ್ಯವಿದೆ.

ವಿದ್ಯಾರ್ಥಿಗಳು ಈ ಅವಕಾಶವನ್ನು ಸಮರ್ಪಕವಾಗಿ ಉಪಯೋಗಿಸಿಕೊಳ್ಳಲು ಹಾಗೂ ನಿಗದಿತ ಅವಧಿಯೊಳಗೆ ಅರ್ಜಿ ಸಲ್ಲಿಸಬೇಕೆಂದು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಂತಾರಾಷ್ಟ್ರೀಯ ಯೋಗ ದಿನಾಚರಣೆಗೆ ಅಗತ್ಯ ಸಿದ್ಧತೆಯಾಗಲಿ: ಶಿವಾನಂದ

**ಯುವ ಮಾರ್ಗ ಸುದ್ದಿ**



**ರಾಯಚೂರು,ಜೂ.18–** 'ಒಂದು ಭೂಮಿ ಒಂದು ಆರೋಗ್ಯಕ್ಕಾಗಿ ಯೋಗ' ಘೋಷವಾಕ್ಯದಡಿ ಜೂನ್ 21ರಂದು ಆಚರಿಸಲ್ಪಡುವ ಅಂತಾರಾಷ್ಟ್ರೀಯ ಯೋಗಾ ದಿನಾಚರಣೆಗೆ ಅಗತ್ಯ ಸಿದ್ದತೆ ಮಾಡಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಹೇಳಿದರು.

ಜೂನ್ 17ರಂದು ನೂತನ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಸಭಾಂಗಣದಲ್ಲಿ 11ನೇ ಅಂತಾರಾಷ್ಟ್ರೀಯ ಯೋಗಾ ದಿನಾಚರಣೆಯ ನಿಮಿತ್ತ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆಯುಷ್ ಇಲಾಖೆ, ರಾಯಚೂರು ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಆಶ್ರಯದಲ್ಲಿ 11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಜೂನ್ 21ರ ಬೆಳಗ್ಗೆ 6.30ಕ್ಕೆ ಮಹಾತ್ಮ ಗಾಂಧಿ ಕ್ರೀಡಾಂಗಣದಲ್ಲಿ ಯೋಗ ಶಿಬಿರ ಆಯೋಜಿಸಲಾಗಿದೆ. 6.45 ರಿಂದ 7 ಗಂಟೆವರೆಗೆ ಧ್ಯಾನ, 7 ಗಂಟೆಯಿಂದ 7.45ರವರೆಗೆ ಯೋಗ ಪ್ರದರ್ಶನ, 8 ರಿಂದ 8.30ರವರೆಗೆ ವೇದಿಕೆಯ ಕಾರ್ಯಕ್ರಮ ನಡೆಯಲಿದೆ. ಇದೆ ವೇಳೆ ಬಹುಮಾನ ವಿತರಣೆ ಮಾಡಲಾಗುತ್ತದೆ ಎಂದರು.

ವಿಶ್ವದಲ್ಲಿ ಸಾರ್ವತ್ರಿಕವಾಗಿ ಜೂನ್ 21ರಂದು ಅಂತಾರಾಷ್ಟ್ರೀಯ ಯೋಗ ದಿನ ಎಂದು ಆಯೋಜಿಸಲಾಗುತ್ತಿದೆ. ಅನಾದಿಕಾಲದಿಂದಲೂ ಯೋಗ ಸಾಧನೆಗೆ ಅತಿ ಮಹತ್ವವಿದೆ. ಇಂದಿನ ಜಗತ್ತು ದೈಹಿಕ ಮತ್ತು ಮಾನಸಿಕ ಆರೋಗ್ಯದ ಗಂಭೀರ ಬಿಕ್ಕಟ್ಟನ್ನು ಎದುರಿಸುತ್ತಿದೆ. ಜನಸಾಮಾನ್ಯರನ್ನು ಇದು ತೀವ್ರವಾಗಿ ಕಾಡುತ್ತಿದೆ. ಇದಕ್ಕೆ ಸುಲಭೋಪಾಯ ಯೋಗ ಮಾತ್ರ ಆಗಿದೆ. ದೀರ್ಘಕಾಲದವರೆಗೆ ಆರೋಗ್ಯವಂತರಾಗಿ ಬಾಳಲು ಯೋಗ ಅತ್ಯಂತ ಸಹಕಾರಿಯಾಗಿದೆ. ಈ ನಿಟ್ಟಿನಲ್ಲಿ ಸ್ವಾಸ್ಥ್ಯ ಸಮಾಜದ ಪರಿಕಲ್ಪನೆಗಾಗಿ ಜಿಲ್ಲಾಡಳಿತ ವತಿಯಿಂದ ಯೋಗ ಶಿಬಿರ ಆಯೋಜಿಸಲಾಗಿದ್ದು, ಸಾರ್ವಜನಿಕರು, ಶಾಲಾ–ಕಾಲೇಜು ವಿದ್ಯಾರ್ಥಿಗಳು, ಯುವಕ ಹಾಗೂ ಯುವತಿಯರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿ ಇದರ ಸದುಪಯೋಗ ಪಡೆಯಬೇಕು ಎಂದು ಅಪರ ಜಿಲ್ಲಾಧಿಕಾರಿಗಳು ಸಭೆಯ ಮೂಲಕ ಮನವಿ ಮಾಡಿದರು.

ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ಅಂಗವಾಗಿ ಜೂನ್ 18ರಂದು ಬೆಳಗ್ಗೆ 9 ಗಂಟೆಗೆ ಮಹಿಳೆಯರು ಮತ್ತು ಪುರುಷರಿಗೆ ವಯೋ ಆಧರಿತ ಯೋಗ ಸ್ಪರ್ಧೆಯನ್ನು ಆಯೋಜಿಸಲಾಗಿದೆ. ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಯೋಗ ಕುರಿತು ಪ್ರಬಂಧ ಸ್ಪರ್ಧೆಯನ್ನು ಮಧ್ಯಾಹ್ನ 2 ಗಂಟೆ ವೇಳೆಗೆ ರಾಯಚೂರ ಏಕ್ ಮಿನಾರ್ ಹತ್ತಿರದ ಜಿಲ್ಲಾ ಅಯುಷ್ ಆಸ್ಪತ್ರೆ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ನೋಂದಣಿಗಾಗಿ ಡಾ.ತಿಮ್ಮಪ್ಪ ವಡ್ಡೆಪಲ್ಲಿ ಮೊ:9900778049 ಇವರಿಗೆ ಸಂಪರ್ಕಿಸಲು ತಿಳಿಸಲಾಗಿದೆ.

ಜೂನ್ 19ರಂದು ಬೆಳಗ್ಗೆ 7.30 ರಿಂದ ಮಹಾತ್ಮಗಾಂಧಿ ಕ್ರೀಡಾಂಗಣದಿಂದ ಜಿಲ್ಲಾ ಆಯುಷ್ ಆಸ್ಪತ್ರೆವರೆಗೆ ಯೋಗ ಜಾಗೃತಿ ಶಿಬಿರ ಆಯೋಜಿಸಲಾಗಿದೆ. ಈ ಕಾರ್ಯಕ್ರಮಕ್ಕೆ ರಾಯಚೂರು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆರೋಗ್ಯ ಇಲಾಖೆ, ಸಾರ್ವಜನಿಕ ಶಿಕ್ಷಣ ಇಲಾಖೆ, ಎನ್.ಸಿ.ಸಿ, ನೆಹರು ಯುವ ಕೇಂದ್ರ, ರಾಷ್ಟ್ರೀಯ ಸೇವಾ ಯೋಜನೆ, ಆಯುಷ್ ಸಂಸ್ಥೆಗಳು, ಆರ್‌ಟಿಪಿಎಸ್/ ವೈಟಿಪಿಎಸ್, ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ರಿಮ್ಸ್ ಮೆಡಿಕಲ್ ಕಾಲೇಜು, ರಾಯಚೂರು ವಿಶ್ವವಿದ್ಯಾಲಯ, ಆರೋಗ್ಯ ಚಿಂತನೆ ಚಾರಿಟೆಬಲ್ ಟ್ರಸ್ಟ್, ಸ್ವಾಮಿ ವಿವೇಕಾನಂದ ಹೋಲಿಸ್ಟಿಕ್ ಹೆಲ್ತ್ ಕೇರ್ ಸೆಂಟರ್, ಶ್ರೀ ಪತಂಜಲಿ ಯೋಗ ಸೇವಾ ಸಮಿತಿ, ರಾಯಚೂರು ಜಿಲ್ಲಾ ಯೋಗಾಸನ ಕ್ರೀಡಾ ಸಂಘ, ಸಹಜ ಸ್ಥಿತಿ ಯೋಗ ಜ್ಞಾನ ಮಂದಿರ, ವ್ಯಕ್ತಿ ವಿಕಾಸ ಕೇಂದ್ರ ಆರ್ಟ ಆಫ್ ಲಿವಿಂಗ್, ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರಿಯ ವಿದ್ಯಾಲಯ, ರಾಮಕೃಷ್ಣ ಜ್ಞಾನ ಮಂದಿರ, ರೋಟರಿ ಕ್ಲಬ್, ಲಯನ್ಸ್ ಕ್ಲಬ್, ಎಸ್.ಎಸ್.ಎಮ್ ಕಾಲೇಜ್, ನೆಹರು ಯುವ ಕೇಂದ್ರ ಸ್ಕೌಟ್ & ಗೈಡ್ಸ್ ಸಂಸ್ಥೆ, ರೆಡ್ ಕ್ರಾಸ್ ಸಂಸ್ಥೆ, ಭಾರತ ಸೇವಾ ದಳ, ತಾರನಾಥ ಶಿಕ್ಷಣ ಸಂಸ್ಥೆ, ಟ್ಯಾಗೋರ್ ಶಿಕ್ಷಣ ಸಂಸ್ಥೆ, ನವೋದಯ ಶಿಕ್ಷಣ ಸಂಸ್ಥೆ, ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರ ರಾಯಚೂರು, ಬಿ.ಎನ್.ಡಬ್ಲೂ ಪತಂಜಲಿ ಯೋಗ ಪ್ರತಿಷ್ಠಾನ ವಡ್ಡೆಪಲ್ಲಿ, ಪತಂಜಲಿ ಯೋಗ ಪ್ರತಿಷ್ಠಾನ ಟ್ರಸ್ಟ್, ಪೂರ್ಣಿಮಾ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ವಂದೆ ಮಾತರಂ ಯುವ ಸಂಘ, ಅನ್ನದಾನಯ್ಯ ಸ್ವಾಮಿ ಯೋಗ ಸನ್ನಿಧಿ, ಜ್ಞಾನ ವಿದ್ಯಾಪೀಠ ಟ್ರಸ್ಟ್ ಹಾಗೂ ಯೋಗ ಆಸಕ್ತ ಖಾಸಗಿ ಶಿಕ್ಷಣ ಸಂಸ್ಥೆಗಳು ಸಹಯೋಗ ನೀಡುತ್ತಿವೆ ಎಂದು ಇದೆ ವೇಳೆ ಜಿಲ್ಲಾ ಆಯುಷ್ ಅಧಿಕಾರಿಗಳಾದ ಡಾ.ಶಂಕರಗೌಡ ಅವರು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಜಿಲ್ಲಾ ಆಯುಷ್ ವೈದ್ಯಾಧಿಕಾರಿ ಡಾ.ಶಂಕರಗೌಡ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಕೆ ಕೊಟ್ರಬಸಪ್ಪ, ಬಿಇಓ ಪರಶುರಾಮ, ಭಾರತ ಸೇವಾ ದಳದ ಶಿವಕುಮಾರ, ಭಾರತ ಸ್ಕೌಟ್ ಮತ್ತು ಗೈಡ್ಸನ ಮಹಮ್ಮದ್ ಶಫುದ್ದೀನ್, ಸಹಜ ಯೋಗ ಪ್ರತಿಷ್ಠಾನದ ನರಸಯ್ಯ, ಆರ್ಟ್ ಆಫ್ ಲಿವಿಂಗ್‌ನ ಮಲ್ಲಿಕಾರ್ಜುನ ಸ್ವಾಮಿ, ಯೋಗಾ ಫೌಂಡೇಶನ್‌ನ ರಮೇಶ್, ಸಿದ್ಧಾರ್ಥ, ಯೋಗಾ ಅಸೋಸಿಯೇಶನ್‌ನ ಡಾ.ತಿಮ್ಮಯ್ಯ, ವೈಟಿಪಿಎಸ್‌ನ ಗಂಗಾಧರ ಎಂ.ಆರ್., ರವೀಶ್ ಕುಮಾರ ಸೇರಿದಂತೆ ಇನ್ನಿತರರು ಇದ್ದರು.

# ಜೂ.20ರಂದು ಕನ್ನಡ ಜಾಗೃತಿ ಸಭೆ– ಎಂ.ಬಸವರಾಜ ಮರಕಂದಿನ್ನಿ

**ಯುವ ಮಾರ್ಗ ಸುದ್ದಿ**

**ಅರಕೇರಾ,ಜೂ.18–**ಜಿಲ್ಲಾ ಮಟ್ಟದ ಕಲ್ಯಾಣಕರ್ನಾಟಕ ಕನ್ನಡ ಜಾಗೃತಿ ಸಭೆಯನ್ನು ಜೂ.20 ರಂದು ಹಮ್ಮಿಕೊ ಳ್ಳಲಾಗಿದೆ ಎಂದುಕನ್ನಡ ಸೇನೆ ಕರ್ನಾಟಕ ಸಂಘಟನೆ ಜಿಲ್ಲಾ ಉಪಾಧ್ಯಕ್ಷ ಎಂ.ಬಸವರಾಜ ಮರಕಂದಿನ್ನಿ ಹೇಳಿದರು.

ಪಟ್ಟಣದಲ್ಲಿ ಕಲ್ಯಾಣ ಕರ್ನಾಟಕಜಾಗೃತಿ ಸಮಾವೇಶ ಭಿತ್ತಿ ಪತ್ರಗಳನ್ನು ಮಂಗಳ ವಾರ ಬಿಡುಗಡೆಗೊಳಿಸಿ ಮಾ ತನಾಡಿದರು. ರಾಯಚೂರಿನ ಕರ್ನಾಟಕ ನೌಕರರ ಭವನ ದಲ್ಲಿಕಾರ್ಯಕ್ರಮ ಹಮ್ಮಿ ಕೊಂ



ಡಿದ್ದು, ಕನ್ನಡ ಸೇನೆ ಕರ್ನಾಟಕ ಸಂಘಟನೆ ರಾಜ್ಯಾಧ್ಯಕ್ಷರಾದ ಕೆ.ಆರ್.ಕುಮಾರ್ ಅವರು ಭಾಗವಹಿಸಲಿದ್ದಾರೆ. ಕನ್ನಡ ನಾಡು, ನುಡಿ, ಜಲ, ನೆಲದ ರಕ್ಷಣೆ ಹಾಗೂ ಅನ್ಯಾಯದ ವಿರುದ್ಧ ಹೋರಾಟ ಮಾಡುವ ಬಗ್ಗೆ ಜಾಗೃತಿ ಮೂಡಿಸಲಾಗುತ್ತದೆ.ಇದೇ ವೇದಿಕೆಯಲ್ಲಿ ಸಾಂಸ್ಕೃತಿಕ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

ತಾಲೂಕುಅಧ್ಯಕ್ಷ ಮಹಿಬೂಬ ಬಡಿಗೇರ್, ಪ್ರಧಾನ ಕಾರ್ಯದರ್ಶಿ ಹನುಮಂತ್ರಾಯ ನಾಯಕ ಗಾಲಿ, ಪದಾಧಿಕಾರಿಗಳಾದ ನಿತ್ಯಾನಂದ ಸ್ವಾಮಿ, ಬಸವರಾಜ ಮಲ್ಲೆದೇವರಗುಡ್ಡ, ಬಾಲಗೌಡ ಸಾತಲ್, ಸಿದ್ದಪ್ಪ ಕಬ್ಬೇರ್‌ಇದ್ದರು.

# ಲಂಚ ಪಡೆಯುತ್ತಿದ್ದ ವೇಳೆ ಲೋಕಾಯುಕ್ತ ಬಲೆಗೆ ಬಿದ್ದ ದ್ವಿತೀಯ ದರ್ಜೆ ಸಹಾಯಕ

**ಕಲಬುರಗಿ,ಜೂ.18–**ಸಿ.ಸಿ ರಸ್ತೆ ಕಾಮಗಾರಿ ಮಾಡಿರುವುದರ ಅನುಮತಿ ಪತ್ರ ಕೊಡುವುದಕ್ಕಾಗಿ 1 ಲಕ್ಷ ರೂ. ಲಂಚ ಪಡೆಯುತ್ತಿದ್ದ ವೇಳೆ ದ್ವಿತೀಯ ದರ್ಜೆ ಸಹಾಯಕರೊಬ್ಬರು ಲೋಕಾಯುಕ್ತ ಬಲೆಗೆ ಬಿದ್ದಿರು ಘಟನೆ ಮಂಗಳವಾರ ಕಾಳಗಿ ತಹಶೀಲ್ದಾರ್ ಕಚೇರಿಯಲ್ಲಿ ನಡೆದಿದೆ.

ದ್ವಿತೀಯ ದರ್ಜೆ ಸಹಾಯಕ ಶರಣಪ್ಪ ಲೋಕಾಯುಕ್ತ ಪೊಲೀಸರ ಬಲೆಗೆ ಬಿದ್ದಿರುವ ಸಿಬ್ಬಂದಿ ಎಂದು ತಿಳಿದುಬಂದಿದೆ. ಶರಣಪ್ಪ ಅವರು, ಸಿಸಿ ರೋಡ್ ಕಾಮಗಾರಿ ಅನುಮತಿ ಪತ್ರ ಕೊಡುವುದಕ್ಕಾಗಿ ಗುತ್ತಿಗೆದಾರ ಅಣವೀರಯ್ಯ ಅವರ ಬಳಿ 1 ಲಕ್ಷ ರೂ. ಹಣ ಬೇಡಿಕೆ ಇಟ್ಟಿದ್ದರು ಎನ್ನಲಾಗಿದೆ. ಈ ಮಾಹಿತಿಯನ್ನು ಅಣವೀರಯ್ಯ ಅವರು ಲೋಕಾಯುಕ್ತ ಪೊಲೀಸರಿಗೆ ಮಾಹಿತಿ ನೀಡಿದ್ದರು. ಎಸ್.ಡಿ.ಎ ಸಿಬ್ಬಂದಿ ಶರಣಪ್ಪ ಲಂಚ ಪಡೆ ಪಡೆಯುತ್ತಿದ್ದ ವೇಳೆಯೇ ಲೋಕಾಯುಕ್ತ ಪೊಲೀಸರ ಎದುರು ರೆಡ್ ಹ್ಯಾಂಡ್ ಆಗಿ ಸಿಕ್ಕಿಬಿದ್ದಿದ್ದಾರೆ.

## ನೂತನ ಕಟ್ಟಡಕ್ಕೆ ಕಚೇರಿ ಸ್ಥಳಾಂತರ

**ರಾಯಚೂರು,ಜೂ.18–**ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಆವರಣದಲ್ಲಿ ಈ ಹಿಂದೆ ಕಾರ್ಯನಿರ್ವಹಿಸುತ್ತಿದ್ದ ಸರ್ಕಾರಿ ವೀಕ್ಷಣಾಲಯ ಮತ್ತು ಬಾಲ ನ್ಯಾಯಮಂಡಳಿ ರಾಯಚೂರ ಕಚೇರಿಯನ್ನು ಇದೀಗ ರಾಯಚೂರ ನಗರದ ಅಜಾದನಗರದಲ್ಲಿನ ಸಂಜೀವಿನಿ ಆಸ್ಪತ್ರೆಯ ಹಿಂದುಗಡೆ ಇರುವ ಶೇಖ್ ಇಮಾಮ್ ರಸಿಡೆನ್ಸಿ 1ನೇ ಮಹಡಿಗೆ ಸ್ಥಳಾಂತರಿಸಲಾಗಿದೆ.

ಇನ್ನು ಮುಂದೆ ಗ್ರಾಹಕರು, ಸರ್ಕಾರಿ ವೀಕ್ಷಣಾಲಯ ಮತ್ತು ಬಾಲ ನ್ಯಾಯಮಂಡಳಿಯ ಕಚೇರಿಯ ಕೆಲಸಗಳಿಗಾಗಿ ಈ ಮೇಲಿನ ವಿಳಾಸಕ್ಕೆ ಮತ್ತು ದೂರವಾಣಿ ಸಂ:08532–229928ಗೆ ಸಂಪರ್ಕಿಸಬಹುದಾಗಿದೆ ಎಂದು ಸರ್ಕಾರಿ ವೀಕ್ಷಣಾಲಯ ಮತ್ತು ಬಾಲ ನ್ಯಾಯಮಂಡಳಿ ಕಚೇರಿಯ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಾಲ ಪುರಸ್ಕಾರ ಪ್ರಶಸ್ತಿಗೆ ಅರ್ಜಿ ಆಹ್ವಾನ

**ರಾಯಚೂರು,ಜೂ.18–**ಮಹಿಳಾ ಮತ್ತು ಅಭಿವೃದ್ಧಿ ಮಂತ್ರಾಲಯ ಭಾರತ ಸರ್ಕಾರದ ವತಿಯಿಂದ 2025ನೇ ಸಾಲಿನ ರಾಷ್ಟ್ರೀಯ ಪ್ರಧಾನಮಂತ್ರಿ ಬಾಲ ಪುರಸ್ಕಾರ ಪ್ರಶಸ್ತಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ರಾಯಚೂರು ಜಿಲ್ಲೆಯಲ್ಲಿ ಧೈರ್ಯ ಮತ್ತು ಸಾಹಸದಿಂದ ಇತರರನ್ನು ರಕ್ಷಿಸಿದ ಹಾಗೂ ಕ್ರೀಡೆ, ಸಮಾಜ ಸೇವೆ, ತಂತ್ರಜ್ಞಾನ, ಪರಿಸರ ಸಂರಕ್ಷಣೆ, ಕಲೆ ಸಂಸ್ಕೃತಿ ಮತ್ತು ನೂತನ ಆವಿಷ್ಕಾರಗಳನ್ನು ಮಾಡಿ ಉತ್ತಮ ಸಾಧನೆ ಮಾಡಿದ 5 ವರ್ಷ ಮೇಲ್ಪಟ್ಟ ಹಾಗೂ 18 ವರ್ಷದೊಳಗಿರುವ ಸಾಧನೆ ಮಾಡಿರುವ ಎಲ್ಲಾ ಮಕ್ಕಳು ರಾಷ್ಟ್ರೀಯ ಪ್ರಧಾನ ಮಂತ್ರಿ ಬಾಲ ಪುರಸ್ಕಾರ ಪ್ರಶಸ್ತಿ–2025ಕ್ಕೆ ಅರ್ಜಿಯನ್ನು ಸಲ್ಲಿಸಲು ಅರ್ಹರಿರುತ್ತಾರೆ.

ಅರ್ಜಿಯನ್ನು ಜುಲೈ 31ರೊಳಗೆ ಆನ್‌ಲೈನ್ (https://awards.gov.in) ಸಲ್ಲಿಸಬಹುದಾಗಿದೆ ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಕಲಿ ವೈದ್ಯರ ಹಾವಳಿ ಕಡಿವಾಣಕ್ಕೆ ಕಾರ್ಯಪಡೆ ಸಮಿತಿ ರಚನೆ

**ರಾಯಚೂರು,ಜೂ.18–**ರಾಯಚೂರು ಜಿಲ್ಲೆಯಲ್ಲಿ ನಕಲಿ ವೈದ್ಯರ ಚಟುವಟಿಕೆಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರ ಆರೋಗ್ಯ ಹಾಗೂ ಹಿತದೃಷ್ಟಿಯಿಂದ ಜಿಲ್ಲಾಧಿಕಾರಿಗಳು ಜೂನ್ 12ರಂದು ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ತಪಾಸಣಾ ಹಾಗೂ ಮೇಲ್ವಿಚಾರಣಾ ಕಾರ್ಯಪಡೆ ಸಮಿತಿಗಳನ್ನು ರಚಿಸಿ ಕ್ರಮ ವಹಿಸಿದ್ದಾರೆ.

ವೈದ್ಯಕೀಯ ಪದವಿ ಇಲ್ಲದೆ ವೈದ್ಯ ವೃತ್ತಿ ನಡೆಸುತ್ತಿರುವ ನಕಲಿ ವೈದ್ಯರ ವಿರುದ್ಧ ಹಾಗೂ ವೈದ್ಯಕೀಯ ಪದವಿ ಹೊಂದಿರುವ ವೈದ್ಯರು ಕೆಪಿಎಂ ಕಾಯ್ದೆ ಅಡಿಯಲ್ಲಿ ನೋಂದಣಿ ಆಗದೆ ಕ್ಲೀನಿಕ್ / ಪಾಲಿ ಕ್ಲೀನಿಕ್/ ನರ್ಸಿಂಗ್ ಹೋಂ/ಆಸ್ಪತ್ರೆ/ ಲ್ಯಾಬ್ / ದಂತ ವೈದ್ಯರು ವೃತ್ತಿ ಅಭ್ಯಾಸ ನಡೆಸುತ್ತಿದ್ದಲ್ಲಿ ಅಂತಹವ ವಿರುದ್ಧ ಕಾರ್ಯಪಡೆಯು ನಿರ್ಧಾಕ್ಷಿಣ್ಯಾವಾಗಿ ಕ್ರಮಕೈಗೊಳ್ಳಲಿದೆ.

ಕೆಪಿಎಂ ಕಾಯ್ದೆಯಡಿ ನೋಂದಾಯಿಸಿದ ಪದ್ಧತಿಯಲ್ಲೇ ವೈದ್ಯಕೀಯ ವೃತ್ತಿ ನಡೆಸುವುದನ್ನು ಬಿಟ್ಟು ಇತರೆ ಯಾವುದೆ ಪದ್ಧತಿಯ್ಲಲಿ ವೈದ್ಯವೃತ್ತಿ ನಡೆಸುತ್ತಿದ್ದಲ್ಲಿ ಅಂತಹವ ವಿರುದ್ಧ ಕೆಪಿಎಂಇ ಕಾಯ್ದೆ ಅಡಿಯಲ್ಲಿ 50 ಸಾವಿರ ದಂಢ ಮತ್ತು 3 ವರ್ಷ ಜೈಲು ಶಿಕ್ಷಾರ್ಹ ಅಪರಾದ ವಾಗಿರುತ್ತದೆ.

**ತಾಲೂಕು ಸಮಿತಿ ರಚನೆ:** ತಾಲೂಕು ತಪಾಸಣಾ ಹಾಗೂ ಮೇಲ್ವಿಚಾರಣೆ ಕಾರ್ಯಪಡೆ ಸಮಿತಿಗೆ ತಹಸೀಲ್ದಾರರು ಅಧ್ಯಕ್ಷರಾಗಿದ್ದು, ತಾಲೂಕು ಆರೋಗ್ಯಾಧಿಕಾರಿಗಳು ಕಾರ್ಯದರ್ಶಿಯಾಗಿರುತ್ತಾರೆ. ಐಎಂಎದ ತಾಲೂಕಾಧ್ಯಕ್ಷರು, ಎಎಫ್‌ಐನ ತಾಲೂಕಾಧ್ಯಕ್ಷರು, ತಾಲೂಕು ಪೋಲಿಸ್ ವೃತ್ತ ನಿರೀಕ್ಷಕರು ಈ ಸಮಿತಿಯ ಸದಸ್ಯರಾಗಿರುತ್ತಾರೆ ಎಂದು ಜಿಲ್ಲಾ ಕೆಪಿಎಂಇ ನೋಂದಣಿ ಮತ್ತು ಕುಂದುಕೊರತೆಗಳ ನಿವಾರಣಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಆಗಿರುವ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಯುದ್ಧ ಘೋಷಿಸಿದ ಅಯತೊಲ್ಲಾ ಖಮೇನಿ



**ನವದೆಹಲಿ,ಜೂ.18–**ಇರಾನ್ ಇಸ್ರೇಲ್ ವಿರುದ್ಧ ಯುದ್ಧ ಘೋಷಿಸಿದೆ. ಇರಾನ್‌ನ ಸರ್ವೋಚ್ಚ ನಾಯಕ ಅಯತೊಲ್ಲಾ ಖಮೇನಿ ತಡರಾತ್ರಿ ಇಸ್ರೇಲ್ ವಿರುದ್ಧ ಯುದ್ಧ ಘೋಷಿಸಿದ್ದಾರೆ. ಅವರು ಜಾಲತಾಣ ಎಕ್ಸ್ ನಲ್ಲಿ ಯುದ್ಧ ಪ್ರಾರಂಭವಾಗುತ್ತದೆ. ಭಯೋತ್ಪಾದಕ ಯಹೂದಿ ಆಡಳಿತಕ್ಕೆ ನಾವು ಬಲವಾದ ಉತ್ತರ ನೀಡುತ್ತೇವೆ. ನಾವು ಅವರಿಗೆ ಯಾವುದೇ ಕರುಣೆ ತೋರಿಸುವುದಿಲ್ಲ ಎಂದು ಬರೆದಿದ್ದಾರೆ.

Owned, Printed and published by **ANILKUMAR H** from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at **MAA FRIENDS PRINTING PRESS,** Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: **ANILKUMAR H**